# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 31(111)

ಸದಸ್ಯರ ಹೆಸರು : ಶ್ರೀ ಎಂ.ಪಿ.ಕುಶಾಲಪ್ಪ (ಸುಜಾ)
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 13.02.2023

ಉತ್ತರಿಸಬೇಕಾದ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಟಿಪ್ಪು ಸುಲ್ತಾನ್ ಬಗೆಗಿನ ಪಠ್ಯವನ್ನು ರಾಜ್ಯದಲ್ಲಿ ಯಾವ ತರಗತಿಯ ಮಕ್ಕಳಿಗೆ ಬೋಧನೆ ಮಾಡಲಾಗುತ್ತಿದೆ; (ಪಠ್ಯದ ವಿವರವನ್ನು ನೀಡುವುದು) | ಟಿಪ್ಪು ಸುಲ್ತಾನ್ ಬಗೆಗಿನ ಪಠ್ಯವನ್ನು ಈ ಕೆಳಕಂಡ ತರಗತಿಗಳಲ್ಲಿ ಅಳವಡಿಸಲಾಗಿದೆ.<br>1. 6ನೇ ತರಗತಿ ಸಮಾಜ ವಿಜ್ಞಾನ ಭಾಗ-1 ಅಧ್ಯಾಯ 2 – ನಮ್ಮ ಹೆಮ್ಮೆಯ ರಾಜ್ಯ ಕರ್ನಾಟಕ<br>2. 7ನೇ ತರಗತಿ ಸಮಾಜ ವಿಜ್ಞಾನ ಭಾಗ-1 ಅಧ್ಯಾಯ 6 – ಮೈಸೂರು ಮತ್ತು ಇತರ ಸಂಸ್ಥಾನಗಳು<br>3. 10ನೇ ತರಗತಿ ಸಮಾಜ ವಿಜ್ಞಾನ ಭಾಗ -1 ಅಧ್ಯಾಯ 4 – ಕರ್ನಾಟಕದಲ್ಲಿ ಬ್ರಿಟಿಷ್ ಆಳ್ವಿಕೆಗೆ ಪ್ರತಿರೋಧಗಳು ಹಾಗೂ ಮೈಸೂರಿನ ಒಡೆಯರು |
| ಆ) | ಟಿಪ್ಪು ಸುಲ್ತಾನ್ ಬಗ್ಗೆ ಈ ಹಿಂದೆ ಇದ್ದ ಪಠ್ಯದ ವಿವರ ಹಾಗೂ ಪ್ರಸ್ತುತ ಬೋಧನೆ ಮಾಡಲಾಗುತ್ತಿರುವ ಪಠ್ಯದ ವಿವರಗಳ ಸಂಪೂರ್ಣ ಮಾಹಿತಿಯನ್ನು ನೀಡುವುದು; | ಟಿಪ್ಪು ಸುಲ್ತಾನ್ ಬಗ್ಗೆ ಈ ಹಿಂದೆ ಇದ್ದ ಪಠ್ಯದ ವಿವರವನ್ನುಅನುಬಂಧ -1 ಮತ್ತು ಪ್ರಸ್ತುತ ಬೋಧನೆ ಮಾಡಲಾಗುತ್ತಿರುವ ಪಠ್ಯದ ವಿವರವನ್ನು ಅನುಬಂಧ-2 ರಲ್ಲಿರಿಸಿದೆ. |
| ಇ) | ಈ ಹಿಂದೆ ಬೋಧನೆ ಮಾಡುತ್ತಿದ್ದ ಪಠ್ಯದಲ್ಲಿನ ಅಂಶಗಳನ್ನು ತೆಗೆದು ಹಾಕಲು ಕಾರಣವೇನು; ತೆಗೆದು ಹಾಕಲಾದ ಅಂಶಗಳ ವಿವರವನ್ನು ಒದಗಿಸುವುದು; ಟಿಪ್ಪುವಿನ ಪಠ್ಯವನ್ನು ಬೋಧನೆ ಮಾಡಲು ತೀವ್ರತರವಾದ ವಿರೋಧವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಿರೋಧದ ನಡುವೆಯು ಮಕ್ಕಳಲ್ಲಿ ಇಂತಹ ವ್ಯಕ್ತಿಯ ಪಠ್ಯವನ್ನು ಬೋಧನೆ ಮಾಡುತ್ತಿರುವುದು ಯಾವ ಕಾರಣಕ್ಕಾಗಿ; ಟಿಪ್ಪುವಿನ ಪಠ್ಯವನ್ನು ಬೋಧಿಸುವುದು ಅವಶ್ಯಕವೇ; | • ಪಠ್ಯ ಪುಸ್ತಕ ಪರಿಷ್ಕರಣ ಸಮಿತಿಯ ಶಿಫಾರಸ್ಸಿನ ಅನ್ವಯ ಟಿಪ್ಪುವಿನ ಕುರಿತ ಅಂಶಗಳನ್ನು10ನೇ ತರಗತಿ ಸಮಾಜ ವಿಜ್ಞಾನ ಭಾಗ-1ರಲ್ಲಿ ಯಥಾವತ್ತಾಗಿ ಮುಂದುವರೆಸಿದೆ. 6 ಮತ್ತು 7ನೇ ತರಗತಿ ಸಮಾಜ ವಿಜ್ಞಾನ ಭಾಗ -1 ರ ಪಠ್ಯ ಪುಸ್ತಕಗಳಲ್ಲಿ ಟಿಪ್ಪುವಿನ ಕುರಿತ ಅಂಶಗಳನ್ನು ಸಂಕ್ಷಿಪ್ತಗೊಳಿಸಿದೆ. (ವಿವರವನ್ನು ಅನುಬಂಧ-3ರಲ್ಲಿ ಲಗತ್ತಿಸಿದೆ).<br>• ಟಿಪ್ಪುವಿನ ಪಠ್ಯವನ್ನು ಬೋಧನೆ ಮಾಡಲು ತೀವ್ರತರವಾದ ವಿರೋಧವಿರುವುದು ಗಮನಕ್ಕೆ ಬಂದಿರುತ್ತದೆ. ಇತಿಹಾಸದಲ್ಲಿ ಕಾಲಾನುಕ್ರಮವಾಗಿ ಆಳ್ವಿಕೆ ಮಾಡಿದಂತಹ ರಾಜರುಗಳ ವಿವರವನ್ನು ನೀಡಿರುವುದರಿಂದ ಟಿಪ್ಪುವಿನ ಬಗೆಗಿನ ವಿಷಯಾಂಶಗಳನ್ನು ಮುಂದುವರೆಸಿದೆ. |

| | | |
|---|---|---|
| | | • ಪಾಠಗಳನ್ನು ವಸ್ತುನಿಷ್ಠವಾಗಿ ಮತ್ತು ಮಕ್ಕಳ ಬೌದ್ಧಿಕ ಹಾಗೂ ಮನೋಸಾಮರ್ಥ್ಯಕ್ಕೆ ಅನುಗುಣವಾಗಿಯೇ ರಚಿಸಲಾಗಿರುತ್ತದೆ. ಅದರಂತೆ ಇತಿಹಾಸ ವಿಭಾಗದಲ್ಲಿರುವ ಟಿಪ್ಪುವಿನ ಪಾಠವನ್ನು ಬೋಧಿಸಲಾಗುತ್ತಿದೆ. |
| **ಈ)** | ಈಗಾಗಲೇ ರಾಜ್ಯದಲ್ಲಿ ಟಿಪ್ಪು ಜಯಂತಿಯನ್ನು ರದ್ದುಗೊಳಿಸಲಾಗಿದ್ದು, ಅದರಂತೆ ಟಿಪ್ಪುವಿನ ಪಠ್ಯವನ್ನು ಬೋಧನೆ ಮಾಡುತ್ತಿರುವುದನ್ನು ಕೈಬಿಡಲಾಗುವುದೇ? (ಮಾಹಿತಿ ನೀಡುವುದು) | ಇಲ್ಲ. |

ಇಪಿ 31 ಪಿಎಂಸಿ 2023

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.

ಅನುಬಂಧ - 1

6ನೇ ತರಗತಿ ಸಮಾಜ ವಿಜ್ಞಾನ ಭಾಗ-1

(2017-18)

**ಚಾರಿತ್ರಿಕ ಹಿನ್ನೆಲೆ**

ಮೈಸೂರಿನ ರಾಜೇತಿಹಾಸ, ಸ್ಪಷ್ಟವಾಗಿ ಆರಂಭವಾಗುವುದು ಗಂಗರ ಕಾಲದಿಂದ ಎಂದು ಹೇಳಲಾಗುತ್ತದೆ. ತಲಕಾಡು ಗಂಗರ ರಾಜಧಾನಿಯಾಗಿತ್ತು. ಆನಂತರ ಚೋಳರು, ಹೊಯ್ಸಳರು ಮತ್ತು ವಿಜಯನಗರದ ಅರಸರು ಮೈಸೂರು ಪ್ರದೇಶದಲ್ಲಿ ಆಳ್ವಿಕೆ ನಡೆಸಿದರು.

ಮೈಸೂರು ಅನೇಕ ಶತಮಾನಗಳ ಕಾಲ ಒಡೆಯರ್ ಅವರ ಮನೆತನದ ಆಳ್ವಿಕೆಯಲ್ಲಿತ್ತು. ಕೆಲವು ವರ್ಷಗಳ ಕಾಲ ಅದು ಹೈದರಾಲಿ ಮತ್ತು ಅವರ ಮಗ ಟಿಪ್ಪುಸುಲ್ತಾನ್ ಅವರುಗಳ ಆಡಳಿತದ ವಶದಲ್ಲಿತ್ತು. ಚಾರಿತ್ರಿಕವಾಗಿ ಮತ್ತು ಪೌರಾಣಿಕವಾಗಿ ಮೈಸೂರನ್ನು ಮಹಿಷನಾಡು ಎಂದು ಕರೆಯಲಾಗುತ್ತದೆ. ಪುರಾಣ ಕಥೆಯ ಪ್ರಕಾರ ದೇವಿ ಪಾರ್ವತಿಯು ಚಾಮುಂಡೇಶ್ವರಿ ರೂಪ ಧರಿಸಿ ಮಹಿಷಾಸುರನನ್ನು ಕೊಂದಳು. ಮಹಿಷಾಸುರನನ್ನು ಕೊಂದ ಸ್ಥಳವೇ ಮೈಸೂರಾಯಿತು. ಯದುರಾಯ ಅನ್ನುವವರು ಒಡೆಯರ್ ಮನೆತನದ ಮೊದಲ ಅರಸು. ಚಿಕ್ಕದೇವರಾಯ ಒಡೆಯರ್ ಅವರು ಪ್ರಸಿದ್ಧ ದೊರೆಯಾಗಿದ್ದರು. ಅವರ ನಂತರ ಸಿಂಹಾಸನಕ್ಕೆ ಬಂದ ಅರಸರು ದುರ್ಬಲರಾಗಿದ್ದರು. ಆ ಸಮಯದಲ್ಲಿ ಸೇನಾಧಿಪತಿಯಾಗಿದ್ದ ಹೈದರಾಲಿಯು ಆಳ್ವಿಕೆಯನ್ನು ವಶಪಡಿಸಿಕೊಂಡ. ಅವನು ಮತ್ತು ಅವನ ಮಗ ಟಿಪ್ಪುಸುಲ್ತಾನ್ 1761 ರಿಂದ 1799 ರವರೆಗೆ ಆಡಳಿತ ನಡೆಸಿದರು. ಬ್ರಿಟಿಷರ ವಿರುದ್ಧ ಅನೇಕ ಹೋರಾಟಗಳನ್ನು ಟಿಪ್ಪು ನಡೆಸಿದನು. ಫ್ರೆಂಚ್‌ರ ಜೊತೆಯಲ್ಲಿ ಸಹಾಯಕ್ಕೆ ಸಂಧಾನ ನಡೆಸಿ ಬ್ರಿಟಿಷರನ್ನು ದೇಶದಿಂದ ಹೊರಹಾಕಲು ಟಿಪ್ಪುಸುಲ್ತಾನ್ ಪ್ರಯತ್ನಿಸಿದ. ಟಿಪ್ಪುಸುಲ್ತಾನನು ಅನೇಕ ಜನಪರ ಕಾರ್ಯಗಳನ್ನು ಕೈಗೊಂಡನು.



ಟಿಪ್ಪುಸುಲ್ತಾನ

ಟಿಪ್ಪುಸುಲ್ತಾನನು 1799ರಲ್ಲಿ ಬ್ರಿಟಿಷರ ಜೊತೆಗಿನ ಯುದ್ಧದಲ್ಲಿ ಪ್ರಾಣ ತೆತ್ತನು. ನಂತರ ಬ್ರಿಟಿಷರು ಆಡಳಿತವನ್ನು ಮತ್ತೆ ಒಡೆಯರ ವಶಕ್ಕೆ ನೀಡಿದರು. ಆಡಳಿತದಲ್ಲಿ ದೌರ್ಬಲ್ಯವನ್ನು ಕಂಡು ಬ್ರಿಟಿಷರು 1831ರಲ್ಲಿ ಆಡಳಿತವನ್ನು ತಮ್ಮ ವಶಕ್ಕೆ ತೆಗೆದುಕೊಂಡರು. ಆದರೆ 1881ರಲ್ಲಿ ಮತ್ತೆ ಆಳ್ವಿಕೆಯನ್ನು ಒಡೆಯರ ವಶಕ್ಕೆ ನೀಡಿದರು. ಕಳೆದ 20ನೆಯ ಶತಮಾನದ ಆದಿ ಭಾಗದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತದಲ್ಲಿ ಅನೇಕ ಜನಪರ ಕಾರ್ಯಗಳಾದವು ವಿಶೇಷವಾಗಿ ಶಿಕ್ಷಣ, ಸಂಸ್ಕೃತಿ, ನೀರಾವರಿಗೆ ಇವರು ಆದ್ಯತೆ ನೀಡಿದರು. ಸರ್. ಎಮ್. ವಿಶ್ವೇಶ್ವರಯ್ಯ ಮತ್ತು ಸರ್. ಮಿರ್ಜಾ ಇಸ್ಮಾಯಿಲ್ ಅವರ ದಿವಾನಗಿರಿಯಲ್ಲಿ ಮೈಸೂರು ಅಪೂರ್ವ ಯಶಸ್ಸನ್ನು ಪಡೆಯಿತು. 1947ರಲ್ಲಿ ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಮೈಸೂರು ಸಂಸ್ಥಾನವು ಭಾರತ ಗಣರಾಜ್ಯದಲ್ಲಿ ವಿಲೀನಗೊಂಡಿತು.



ನಾಲ್ವಡಿ ಕೃಷ್ಣರಾಜ ಒಡೆಯರ್



ಸರ್. ಮಿರ್ಜಾ ಇಸ್ಮಾಯಿಲ್

ಈ ವಿಭಾಗದ ಬೇರೆ ಬೇರೆ ಜಿಲ್ಲೆಗಳಲ್ಲಿ ವಿವಿಧ ರಾಜ ಮನೆತನಗಳು ಆಳ್ವಿಕೆ ನಡೆಸಿದ ಚರಿತ್ರೆಯಿದೆ. ಕೊಡಗು ಪ್ರದೇಶವನ್ನು ಅನೇಕ ರಾಜ ಮನೆತನಗಳು ಆಡಳಿತ ನಡೆಸಿದವು. ಹಾಲೇರಿ ಮನೆತನವು 17ನೆಯ ಶತಮಾನದಲ್ಲಿ ತನ್ನ ಆಳ್ವಿಕೆಯನ್ನು ಸ್ಥಾಪಿಸಿತು. ಬಿದನೂರು ಇವರ ರಾಜಧಾನಿಯಾಗಿತ್ತು. ಹಾಲೇರಿ ಅರಸರಲ್ಲಿ ದೊಡ್ಡವೀರಪ್ಪ ಪ್ರಸಿದ್ಧ ದೊರೆ. ಚಿಕ್ಕವೀರರಾಜ ಕೊನೆಯ ಅರಸ. ಇವನು ದುರ್ಬಲನಾಗಿದ್ದ. ಇದನ್ನು ಬಳಸಿಕೊಂಡು ಬ್ರಿಟಿಷರು ಆಡಳಿತವನ್ನು ತಮ್ಮ ವಶಕ್ಕೆ ತೆಗೆದುಕೊಂಡರು. ಸ್ವಾತಂತ್ರ್ಯಾನಂತರ ಕೊಡಗು ಪ್ರತ್ಯೇಕ ರಾಜ್ಯವಾಗಿತ್ತು. ಆದರೆ 1956ರಲ್ಲಿ ಅದು ಕರ್ನಾಟಕದಲ್ಲಿ ವಿಲೀನಗೊಂಡಿತು. ಕೆಳದಿ ಸಂಸ್ಥಾನ ಮತ್ತೊಂದು ರಾಜಮನೆತನವಾಗಿದೆ.

ಕರ್ನಾಟಕದ ಕರಾವಳಿ ಪ್ರದೇಶವನ್ನು ತುಳುನಾಡು ಎಂದು ಕರೆಯುತ್ತಿದ್ದರು. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳನ್ನು ಒಳಗೊಂಡ ತುಳುನಾಡನ್ನು 7ನೆಯ ಶತಮಾನದಿಂದ 14ನೆಯ ಶತಮಾನದವರೆಗೆ ಅಳುಪ ಮನೆತನದ ಅರಸರು ಆಳ್ವಿಕೆ ನಡೆಸಿದರು. ಬೇರೆ ಬೇರೆ ಕಾಲಘಟ್ಟಗಳಲ್ಲಿ ಉದ್ಯಾವರ, ಮಂಗಲಪುರ, ಹುಂಚ ಮತ್ತು ಬನವಾಸಿಗಳು ಅಳುಪರ ರಾಜಧಾನಿಗಳಾಗಿದ್ದವು. ತುಳುನಾಡಿನಲ್ಲಿ ಅನೇಕ ಪಾಳೆಗಾರರು ಆಡಳಿತ ನಡೆಸಿದರು. ಅವರಲ್ಲಿ ಪ್ರಸಿದ್ಧರಾದವರೆಂದರೆ ಪುತ್ತಿಗೆಯ ಚೌಟರು, ಬಂಗವಾಡಿಯ ಬಂಗರು, ಕಾರ್ಕಳದ ಬೈರವರಸರು, ಕಾಸರಗೋಡಿನ ಕುಂಬಳೆ ಅರಸರು ಮುಂತಾದವರು.

ಕರಾವಳಿ ಪ್ರದೇಶವನ್ನು ಬ್ರಿಟಿಷರು ಕೆನರ ಎಂದು ಕರೆದರು. ಈ ಪ್ರದೇಶವನ್ನು ಅವರು 1801ರಲ್ಲಿ ವಶಪಡಿಸಿಕೊಂಡರು. ಬ್ರಿಟಿಷರು ಕರಾವಳಿಯನ್ನು 1860ರಲ್ಲಿ ಉತ್ತರ ಕನ್ನಡ ಮತ್ತು ದಕ್ಷಿಣ ಕನ್ನಡ ಎಂದು ವಿಭಜಿಸಿದರು. ದಕ್ಷಿಣ ಕನ್ನಡ ಜಿಲ್ಲೆಯನ್ನು ವಿಭಜಿಸಿ 1997ರಲ್ಲಿ ಉಡುಪಿ ಜಿಲ್ಲೆಯನ್ನು ರಚಿಸಲಾಯಿತು.

**I.** ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.

1. ಮೈಸೂರು ವಿಭಾಗದಲ್ಲಿ ಇಂದು ಎಷ್ಟು ಜಿಲ್ಲೆಗಳಿವೆ?
2. ಮೈಸೂರು ಎಂಬ ಹೆಸರು ಬರಲು ಕಾರಣವನ್ನು ತಿಳಿಸಿ.
3. ಮೈಸೂರು ಸಂಸ್ಥಾನದ ಬೆಳವಣಿಗೆಗೆ 20ನೆಯ ಶತಮಾನದ ಆದಿ ಭಾಗದಲ್ಲಿ ಕಾರಣರಾದ ಒಡೆಯರ್ ಹೆಸರನ್ನು ಬರೆಯಿರಿ.
4. ಕರಾವಳಿ ಪ್ರದೇಶವನ್ನು ಬ್ರಿಟಿಷರು ಮೊದಲು ಏನೆಂದು ಕರೆದರು?

**II.** ಖಾಲಿ ಜಾಗಗಳನ್ನು ಭರ್ತಿ ಮಾಡಿ.

1. ದಕ್ಷಿಣ ಕನ್ನಡ ಜಿಲ್ಲೆಯನ್ನು ವಿಭಜಿಸಿ ---------- ವರ್ಷ ಉಡುಪಿ ಜಿಲ್ಲೆಯನ್ನು ರಚಿಸಲಾಯಿತು.
2. ಮೈಸೂರು ವಿಭಾಗದ ------------ ಮತ್ತು -------------- ಕರಾವಳಿ ಜಿಲ್ಲೆಗಳು

ಪ್ರಾಕೃತಿಕ ಸಂಪನ್ಮೂಲ


ಈ ವಿಭಾಗವು ವಿವಿಧ ಹವಾಮಾನಗಳಿಂದ ಕೂಡಿದ ಪ್ರದೇಶವಾಗಿದೆ. ಈ ವಿಭಾಗಕ್ಕೆ ಸೇರಿದ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳು ವಿಶಾಲವಾದ ಕರಾವಳಿ ಪ್ರದೇಶವನ್ನು ಹೊಂದಿವೆ. ಪರ್ವತ ಶ್ರೇಣಿ, ದಟ್ಟ ಕಾಡುಗಳು ಮತ್ತು ಕರಾವಳಿ ಪ್ರದೇಶಗಳು ಒಟ್ಟಿಗೆ ಇಲ್ಲಿರುವುದರಿಂದ ಇಲ್ಲಿನ ವಾಯುಗುಣವನ್ನು ಉಷ್ಣ ವಲಯದ ಮಳೆಮಾರುತ ವಾತಾವರಣ ಎಂದು ಕರೆಯಲಾಗುತ್ತದೆ.



(2)

ಒದಗಿಸಿದರು. ಇವರು ಆಡಳಿತದಲ್ಲಿ ಮಿತವ್ಯಯ ಜಾರಿಗೆ ತಂದು, ರಾಜ್ಯದ ಭಂಡಾರವನ್ನು ಶ್ರೀಮಂತಗೊಳಿಸಿ 'ನವಕೋಟಿ ನಾರಾಯಣ' ಎಂಬ ಬಿರುದಿಗೆ ಪಾತ್ರರಾದರು.

ಚಿಕ್ಕದೇವರಾಜ ಒಡೆಯರ ಕಾಲದಲ್ಲಿ ಮೈಸೂರು ಸಂಪದ್ಭರಿತ ರಾಜ್ಯವಾಗಿತ್ತು. ಇವರ ಮರಣ ನಂತರ ದುರ್ಬಲ ಅರಸರು ಆಳಿದರು. ಇದರಿಂದಾಗಿ ದಳವಾಯಿಗಳೆಂಬ ಅಧಿಕಾರಿಗಳು ಆಡಳಿತವನ್ನು ರಾಜನ ಹೆಸರಿನಲ್ಲಿ ನಡೆಸಿದರು.



ಅಠಾರಾ ಕಛೇರಿ, ಮೈಸೂರು

## ಹೈದರಾಲಿ ಮತ್ತು ಟಿಪ್ಪು ಸುಲ್ತಾನ್

### ಹೈದರಾಲಿ (ಸಾ.ಶ. 1761 –1782)



ಹೈದರಾಲಿ

ಹೈದರಾಲಿಯು ದಳವಾಯಿ ನಂಜರಾಜಯ್ಯನ ಸೇನೆಯಲ್ಲಿದ್ದ ಸಮರ್ಥ ಸೇನಾನಿಯಾಗಿದ್ದನು. ಶೂರನೂ, ಸಾಹಸಿಯೂ ಆಗಿದ್ದನು. ಯುದ್ಧಗಳಲ್ಲಿ ಜಯಗಳಿಸಿ ಹಂತಹಂತವಾಗಿ ತನ್ನ ಸೇನಾಬಲ ಮತ್ತು ಧನಬಲವನ್ನು ಹೆಚ್ಚಿಸಿಕೊಂಡನು. ಹೀಗೆ ರಾಜನ ಗೌರವಕ್ಕೆ ಪಾತ್ರನಾದನು. ಅಲ್ಲದೆ, ಮೈಸೂರು ರಾಜ್ಯವನ್ನು ಸಂದಿಗ್ಧ ರಾಜಕೀಯದಿಂದ ಪಾರುಮಾಡಿದನು. ರಾಜಧಾನಿಯಲ್ಲಿ ಸೈನಿಕ ಬಂಡಾಯ ಕಾಣಿಸಿಕೊಂಡಾಗ ಹೈದರಾಲಿ ದಳವಾಯಿ ನಂಜರಾಜನನ್ನು ನಿವೃತ್ತಿಗೊಳಿಸಿ ರಾಜ್ಯಾಧಿಕಾರವನ್ನು ಕೈಗೆತ್ತಿಕೊಂಡನು. ರಾಜ್ಯದ ಕಾರ್ಯಕರ್ತನೆಂದು ಕರೆದುಕೊಂಡು ಎರಡನೆಯ ಕೃಷ್ಣರಾಜ ಒಡೆಯರನ್ನು ಬದಿಗೊತ್ತಿದನು.

ಅಧಿಕಾರ ವಹಿಸಿಕೊಂಡ ಒಡನೆಯೇ ಹೈದರಾಲಿಯು ರಾಜ್ಯದ ವಿಸ್ತರಣೆಯಲ್ಲಿ ತೊಡಗಿದನು. ಕೆಳದಿ ರಾಜರನ್ನು ಸೋಲಿಸಿದನು. ಅಲ್ಲಿನ ಅಪಾರವಾದ ಧನಕನಕಾದಿಗಳನ್ನು

ವಶಪಡಿಸಿಕೊಂಡು ತನ್ನ ಧನಬಲವನ್ನು ಇನ್ನಷ್ಟು ಹೆಚ್ಚಿಸಿಕೊಂಡನು. ಚಿತ್ರದುರ್ಗ ಕೋಟೆಯನ್ನು ಪ್ರಯಾಸದಿಂದ ವಶಪಡಿಸಿಕೊಂಡನು.

**ಬ್ರಿಟಿಷರೊಂದಿಗೆ ಹೋರಾಟ :** ವ್ಯಾಪಾರಿಗಳಾಗಿ ಭಾರತಕ್ಕೆ ಬಂದಿದ್ದ ಬ್ರಿಟಿಷರು ಕ್ರಮೇಣ ರಾಜಕೀಯ ಶಕ್ತಿಯಾಗಿ ಎದ್ದುನಿಂತರು. ಹೈದರಾಲಿ ದಕ್ಷಿಣ ಭಾರತದಲ್ಲಿ ರಾಜ್ಯ ವಿಸ್ತರಣೆ ಮಾಡುವುದನ್ನು ಅವರು ಸಹಿಸದಾದರು. ಹೀಗಾಗಿ ಹೈದರಾಲಿ ಮತ್ತು ಬ್ರಿಟಿಷರ ನಡುವೆ ಸಂಘರ್ಷ ಅನಿವಾರ್ಯವಾಯಿತು.

ಹೈದರಾಲಿ ಮತ್ತು ಅವನ ಮಗನಾದ ಟಿಪ್ಪು ಸುಲ್ತಾನ್ ಬ್ರಿಟಿಷರೊಡನೆ ಮಾಡಿದ ನಾಲ್ಕು ಯುದ್ಧಗಳನ್ನು 'ಆಂಗ್ಲೋ ಮೈಸೂರು ಯುದ್ಧಗಳು' ಅಥವಾ 'ಮೈಸೂರು ಯುದ್ಧಗಳು' ಎನ್ನುವರು.

ಮೊದಲನೇ ಆಂಗ್ಲೋ ಮೈಸೂರು ಯುದ್ಧದಲ್ಲಿ ಹೈದರಾಲಿಯ ಆಕ್ರಮಣದಿಂದ ಬ್ರಿಟಿಷರು ಅಪಾರ ಹಾನಿಗೊಳಗಾದರು. ಅನಿವಾರ್ಯವಾಗಿ ಬ್ರಿಟಿಷರು ಮದ್ರಾಸ್ ಒಪ್ಪಂದಕ್ಕೆ ಮುಂದಾದರು. ಮದ್ರಾಸ್ ಒಪ್ಪಂದದ ಮುಖ್ಯ ತಿರುಳೆಂದರೆ, ಹೈದರಾಲಿ ಅಥವಾ ಬ್ರಿಟಿಷರ ಮೇಲೆ ಯಾವುದೇ ಶತ್ರು ರಾಜ್ಯ ಆಕ್ರಮಣ ಮಾಡಿದಲ್ಲಿ ಪರಸ್ಪರ ರಾಜ್ಯಗಳು ನೆರವಿಗೆ ಧಾವಿಸಬೇಕು ಎಂಬುದಾಗಿತ್ತು. ಈ ಒಪ್ಪಂದವು ಹೈದರಾಲಿಯ ಘನತೆಯನ್ನು ಹೆಚ್ಚಿಸಿತು.

ಕೆಲವು ವರ್ಷಗಳ ನಂತರ ಮರಾಠರು ಮೈಸೂರಿನ ಮೇಲೆ ಆಕ್ರಮಣ ಮಾಡಿದರು. ಆ ಸಂದರ್ಭದಲ್ಲಿ ಮದ್ರಾಸ್ ಒಪ್ಪಂದದಂತೆ ಬ್ರಿಟಿಷರು ಹೈದರಾಲಿಯ ಸಹಾಯಕ್ಕೆ ಧಾವಿಸದೆ ತಟಸ್ಥರಾದರು. ಇದರಿಂದ ಹೈದರಾಲಿ ಸಿಡಿಮಿಡಿಗೊಂಡು ಬ್ರಿಟಿಷರನ್ನು ಯುದ್ಧಕ್ಕೆಳೆದನು. ಈ ಯುದ್ಧವೇ ಎರಡನೇ ಆಂಗ್ಲೋ ಮೈಸೂರು ಯುದ್ಧ. ಯುದ್ಧ ನಡೆಯುತ್ತಿದ್ದಾಗಲೇ ಹೈದರಾಲಿಯು ಅನಾರೋಗ್ಯದಿಂದ ಮರಣವನ್ನಪ್ಪಿದನು. ಯುದ್ಧವನ್ನು ಟಿಪ್ಪು ಸುಲ್ತಾನ್‌ನು ಮುಂದುವರೆಸಿದನು.

ಹೈದರಾಲಿಯ ಸಾಧನೆಗಳು: ಹೈದರಾಲಿ ಸಮಕಾಲೀನ ರಾಜಕೀಯವನ್ನು ಚೆನ್ನಾಗಿ ತಿಳಿದುಕೊಂಡಿದ್ದನು. ಇವನಿಗೆ ಓದುಬರಹ ಬರುತ್ತಿರಲಿಲ್ಲವಾದರೂ ಕನ್ನಡ ಸೇರಿದಂತೆ ಹಲವು ಭಾಷೆಗಳನ್ನು ಚೆನ್ನಾಗಿ ಬಲ್ಲವನಾಗಿದ್ದನು. ಇವನು ಮೈಸೂರು ರಾಜ್ಯದ ವಿಸ್ತಾರವನ್ನು ಇಮ್ಮಡಿಗೊಳಿಸಿದನು. ಶೂರ ಯೋಧನೂ ದಕ್ಷ ಆಡಳಿತಗಾರನೂ ಆಗಿದ್ದನು. ಹೈದರಾಲಿಗೆ ಕರ್ನಾಟಕ ಇತಿಹಾಸದಲ್ಲಿ ಪ್ರಮುಖ ಸ್ಥಾನವಿದೆ. ಬೆಂಗಳೂರಿನ ಸುಂದರ ಉದ್ಯಾನವನ ಲಾಲ್‌ಬಾಗ್ ಇವನಿಂದಲೇ ಆರಂಭವಾಯಿತು.

**ಟಿಪ್ಪು ಸುಲ್ತಾನ್ (ಸಾ.ಶ. 1782–1799)**

ಹೈದರಾಲಿಯ ಮಗನೇ ಟಿಪ್ಪು ಸುಲ್ತಾನ್. ತನ್ನ ತಂದೆಯ ಕಾಲದ ಯುದ್ಧಗಳಲ್ಲಿ ಪಾಲ್ಗೊಂಡು ವಿಜಯವನ್ನು ಗಳಿಸಿದ ಟಿಪ್ಪು ಸುಲ್ತಾನ್ ಧೀರ ತರುಣನಾಗಿದ್ದನು. ತನ್ನನ್ನು ಸುಲ್ತಾನನೆಂದು ಘೋಷಿಸಿಕೊಂಡನು.




(4)

ತಂದೆಯ ಮರಣಾನಂತರ ಆಗ ನಡೆಯುತ್ತಿದ್ದ ಎರಡನೇ ಆಂಗ್ಲೋ ಮೈಸೂರು ಯುದ್ಧವನ್ನು ಟಿಪ್ಪು ಮುಂದುವರೆಸಿದನು. ಆತನ ಸಹಾಯಕ್ಕೆ ಯಾರೂ ಬರಲಿಲ್ಲ. ಟಿಪ್ಪು ಏಕಾಂಗಿಯಾಗಿ ಬ್ರಿಟಿಷರನ್ನು ಎದುರಿಸಿದನು. ಅಂತಿಮವಾಗಿ ಬ್ರಿಟಿಷರು 'ಮಂಗಳೂರು ಶಾಂತಿ ಒಪ್ಪಂದ' ಮಾಡಿಕೊಂಡರು. ಮಂಗಳೂರು ಒಪ್ಪಂದ ಉಭಯ ಪಕ್ಷದವರಿಗೂ ಹಿತಕರವಾಗಿದ್ದಿತು. ಇಬ್ಬರೂ ಗೆದ್ದಿದ್ದ ಪ್ರದೇಶಗಳನ್ನು ಬಿಟ್ಟುಕೊಟ್ಟು ಯುದ್ಧ ಖೈದಿಗಳನ್ನು ಹಿಂತಿರುಗಿಸಿದರು. ಇದು ಟಿಪ್ಪುವಿನ ಘನತೆಯನ್ನು ಹೆಚ್ಚಿಸಿತು.


ಟಿಪ್ಪು ಸುಲ್ತಾನ್

ಅಲ್ಪಕಾಲದಲ್ಲಿಯೇ ಟಿಪ್ಪು ಮತ್ತು ಬ್ರಿಟಿಷರ ನಡುವೆ ಇನ್ನೆರಡು ಯುದ್ಧಗಳು ನಡೆದವು. ಟಿಪ್ಪು ಮತ್ತು ಬ್ರಿಟಿಷರ ನಡುವಣ ಪರಸ್ಪರ ದ್ವೇಷ ಮತ್ತು ಅಪನಂಬಿಕೆಯೇ ಈ ಯುದ್ಧಗಳಿಗೆ ಮೂಲ ಕಾರಣವಾಗಿತ್ತು.

ಮೂರನೆಯ ಆಂಗ್ಲೋ ಮೈಸೂರು ಯುದ್ಧದಲ್ಲಿ ಬ್ರಿಟಿಷರು ಆಕ್ರಮಣ ಮಾಡುತ್ತಾ ರಾಜಧಾನಿಯಾದ ಶ್ರೀರಂಗಪಟ್ಟಣವನ್ನು ಮುತ್ತಿಗೆ ಹಾಕಿದರು. ಬೇರೆ ಮಾರ್ಗ ತೋಚದೆ ಟಿಪ್ಪು ಬ್ರಿಟಿಷರೊಡನೆ ಶ್ರೀರಂಗಪಟ್ಟಣ ಶಾಂತಿ ಒಪ್ಪಂದ ಮಾಡಿಕೊಂಡನು. ಶಾಂತಿ ಒಪ್ಪಂದದಂತೆ ಇವನು ತನ್ನ ಅರ್ಧರಾಜ್ಯವನ್ನು ಬ್ರಿಟಿಷರಿಗೆ ಒಪ್ಪಿಸಿದನು. ಯುದ್ಧ ನಷ್ಟವಾಗಿ 330 ಲಕ್ಷ ರೂಪಾಯಿ ಪರಿಹಾರ ಧನವನ್ನು ಅವರಿಗೆ ನೀಡಬೇಕಾಯಿತು. ಅದನ್ನು ಕೊಡುವವರೆಗೆ ತನ್ನಿಬ್ಬರು ಮಕ್ಕಳನ್ನು ಬ್ರಿಟಿಷರಿಗೆ ಒತ್ತೆಯಾಳಾಗಿ ಕೊಡಬೇಕಾಯಿತು.




ಯುದ್ಧದ ಪರಿಣಾಮವಾಗಿ ಟಿಪ್ಪು ಅವಮಾನಗೊಂಡನು. ಬ್ರಿಟಿಷರನ್ನು ಭಾರತದಿಂದ ಹೊರದಬ್ಬಲು ದೃಢಸಂಕಲ್ಪ ಮಾಡಿದನು. ಇದು ನಾಲ್ಕನೆಯ ಆಂಗ್ಲೋ ಮೈಸೂರು ಯುದ್ಧಕ್ಕೆನಾಂದಿಯಾಯಿತು. ಯುದ್ಧದಲ್ಲಿ ಶ್ರೀರಂಗಪಟ್ಟಣವು ಮುತ್ತಿಗೆಗೊಳಗಾಯಿತು. ಟಿಪ್ಪು ವೀರಾವೇಶದಿಂದ ಹೋರಾಡುತ್ತಲೇ 1799ರಲ್ಲಿ ಅಸುನೀಗಿದನು. ಟಿಪ್ಪುವು 'ಮೈಸೂರಿನ ಹುಲಿ'ಯೆಂದು ಪ್ರಸಿದ್ಧನಾಗಿದ್ದಾನೆ.

ಟಿಪ್ಪು ಸುಲ್ತಾನನ ಮರಣಾನಂತರ ಮೈಸೂರು ರಾಜ್ಯ ಬ್ರಿಟಿಷರ ವಶವಾಯಿತು. ಬ್ರಿಟಿಷರು ಒಡೆಯರ್ ರಾಜವಂಶದ ಮುಮ್ಮಡಿ ಕೃಷ್ಣರಾಜ ಒಡೆಯರಿಗೆ ರಾಜ್ಯವನ್ನು ಹಸ್ತಾಂತರಿಸಿದರು. ಆದರೆ ಮೈಸೂರು ರಾಜ್ಯ ಬ್ರಿಟಿಷರ ಆಶ್ರಿತ ರಾಜ್ಯವಾಯಿತು.

**ಟಿಪ್ಪುವಿನ ವ್ಯಕ್ತಿತ್ವ ಮತ್ತು ಸಾಧನೆಗಳು**

• ವಿಜ್ಞಾನ ಕ್ಷೇತ್ರದ ಸಾಧನೆಗಳ ಬಗ್ಗೆ ಅವನಿಗೆ ಉತ್ತಮ ತಿಳುವಳಿಕೆ ಇತ್ತು. ಅವನು ಒಳ್ಳೆಯ ಗ್ರಂಥಾಲಯವನ್ನು




5

ಹೊಂದಿದ್ದನು. ಬೆಂಗಳೂರಿನ ಅರಮನೆ, ಶ್ರೀರಂಗಪಟ್ಟಣದ ಬೇಸಿಗೆ ಅರಮನೆ (ದರಿಯಾ ದೌಲತ್) ನಿರ್ಮಾಣವನ್ನು ಟಿಪ್ಪು ಮಾಡಿಸಿದನು. ಬೇಸಿಗೆ ಅರಮನೆಯ ಗೋಡೆ, ಚಾವಣಿ ಮತ್ತು ಕಂಬಗಳ ಮೇಲೆ ಚಾರಿತ್ರಿಕ ಸಂಗತಿಗಳನ್ನು ಆಕರ್ಷಕವಾಗಿ ಚಿತ್ರಿಸಲಾಗಿದೆ.



ಬೆಂಗಳೂರು ಅರಮನೆ




ದರಿಯಾ ದೌಲತ್, ಶ್ರೀರಂಗಪಟ್ಟಣ

- ಟಿಪ್ಪು ರಾಜ್ಯದ ಸಮೃದ್ಧಿಗಾಗಿ ಬಹಳವಾಗಿ ಶ್ರಮಿಸಿದನು. ರೇಷ್ಮೆ ವ್ಯವಸಾಯವನ್ನು ರಾಜ್ಯದಲ್ಲಿ ವ್ಯಾಪಕವಾಗಿ ಜನಪ್ರಿಯಗೊಳಿಸಿದ್ದು ಅವನ ಮುಖ್ಯ ಸಾಧನೆಯಾಗಿದೆ. ಫ್ರೆಂಚ್ ಅಧಿಕಾರಿಗಳ

ನೆರವಿನಿಂದ ತನ್ನ ಸೈನ್ಯವನ್ನು ಆಧುನಿಕವಾಗಿ ಸಜ್ಜುಗೊಳಿಸಿದನು. ಶ್ರೀರಂಗಪಟ್ಟಣದಲ್ಲಿ ಫಿರಂಗಿಗಳನ್ನು ಎರಕ ಹೊಯ್ಯುತ್ತಿದ್ದರು. ಟಿಪ್ಪು ರಾಕೆಟ್ ಬಳಸುವ ತಂತ್ರಜ್ಞಾನವನ್ನು ಕರಗತ ಮಾಡಿಕೊಂಡದ್ದು ಒಂದು ವಿಶೇಷ.

- ಟಿಪ್ಪು ಕೆಲವು ಹಿಂದೂ ದೇವಾಲಯಗಳಿಗೆ ದಾನದತ್ತಿಯನ್ನೂ ಶೃಂಗೇರಿ ಮಠಕ್ಕೆ ದೇಣಿಗೆಯನ್ನೂ ನೀಡಿದನು. ಅವನು ಭೂಹಿಡುವಳಿಯಲ್ಲಿ ಸುಧಾರಣೆ ಮಾಡಿ ರೈತರಿಗೆ ಸುಲಭ ಕಂತಿನ ಸಾಲ ಒದಗಿಸುವುದನ್ನು ಒಳಗೊಂಡಂತೆ ಅನೇಕ ಸೌಲಭ್ಯಗಳನ್ನು ಒದಗಿಸಿದನು.
- ಶ್ರೀರಂಗಪಟ್ಟಣದಲ್ಲಿರುವ ಹೈದರಾಲಿಯ ಸಮಾಧಿ ಮತ್ತು ಜುಮ್ಮಾ ಮಸೀದಿ ಟಿಪ್ಪುವಿನ ಭವ್ಯ ನಿರ್ಮಾಣಗಳು. ಮಸೀದಿಯ ಉನ್ನತವಾದ ಮಿನಾರುಗಳು ಆಕರ್ಷಕವಾಗಿವೆ. ಶ್ರೀರಂಗಪಟ್ಟಣ ಮತ್ತು ಬೆಂಗಳೂರಿನಲ್ಲಿ ಟಂಕಶಾಲೆಗಳನ್ನು ನಿರ್ಮಿಸಿದನು.



ಜುಮ್ಮಾ ಮಸೀದಿ, ಶ್ರೀರಂಗಪಟ್ಟಣ

### ಮುಮ್ಮಡಿ ಕೃಷ್ಣರಾಜ ಒಡೆಯರು (ಸಾ.ಶ. 1799–1831)



ಮುಮ್ಮಡಿ ಕೃಷ್ಣರಾಜ ಒಡೆಯರು

ಟಿಪ್ಪು ಸುಲ್ತಾನನ ಮರಣದೊಂದಿಗೆ ಮೈಸೂರು ಇತಿಹಾಸದಲ್ಲಿ ಹೋರಾಟದ ಯುಗವು ಮುಕ್ತಾಯಗೊಂಡಿತು. ಬ್ರಿಟಿಷರು ಮೈಸೂರು ಸಂಸ್ಥಾನವನ್ನು ವಶಪಡಿಸಿಕೊಂಡು ನಾಲ್ಕು ಭಾಗಗಳಾಗಿ ವಿಭಾಗಿಸಿ ಬ್ರಿಟಿಷರು ಮತ್ತು ಅವರ ಮಿತ್ರರಾದ ಮರಾಠರು ಹಾಗೂ ನಿಜಾಮರು ಮೂರು ಭಾಗಗಳನ್ನು ಹಂಚಿಕೊಂಡರು. ಉಳಿದ ಒಂದು ಭಾಗವನ್ನು ಮೈಸೂರಿನ ಒಡೆಯರಿಗೆ ಬಿಟ್ಟುಕೊಟ್ಟರು. ಅಲ್ಲದೆ, ಮುಮ್ಮಡಿ ಕೃಷ್ಣರಾಜ ಒಡೆಯರನ್ನು ಅಧಿಕಾರಕ್ಕೆ ತಂದರು. ಕೃಷ್ಣರಾಜರು ಇನ್ನೂ ಐದು ವರ್ಷದ ಬಾಲಕನಾಗಿದ್ದರಿಂದ ಆಡಳಿತವನ್ನು ಪೂರ್ಣಯ್ಯನವರಿಗೆ ವಹಿಸಿ ದಿವಾನರನ್ನಾಗಿ ನೇಮಿಸಲಾಯಿತು.



(7)

### ಟಿಪ್ಪು ಸುಲ್ತಾನ



ಟಿಪ್ಪು ಸುಲ್ತಾನ

ಬ್ರಿಟಿಷರನ್ನು ತನ್ನ ರಾಜ್ಯ ವಿಸ್ತರಣೆಯ ನೀತಿಗೆ ಅಡ್ಡಪಡಿಸುತ್ತಿರುವ ಶತ್ರುಗಳು ಎಂದು ಭಾವಿಸಿ ಅವರನ್ನು ಓಡಿಸುವ ಗಂಭೀರ ಪ್ರಯತ್ನಗಳನ್ನು ಮಾಡಿದನು. ತಮ್ಮ ಕುಟಿಲ ನೀತಿಯಿಂದ ಭಾರತೀಯ ರಾಜ್ಯಗಳನ್ನು ಕಬಳಿಸುತ್ತಿದ್ದ ಬ್ರಿಟಿಷರನ್ನು ಪರಮ ವೈರಿಗಳು ಎಂದು ತಿಳಿದ ಅವನು ಅವರನ್ನು ಭಾರತದಿಂದ ಓಡಿಸುವುದು ತನ್ನ ಆದ್ಯ ಕರ್ತವ್ಯವೆಂದು ತಿಳಿದಿದ್ದನು. ತನ್ನ 17 ವರ್ಷಗಳ ಆಳ್ವಿಕೆಯಲ್ಲಿ ನಿರಂತರವಾಗಿ ಬ್ರಿಟಿಷರೊಂದಿಗೆ ಹೋರಾಡಿದನು. ಅವನು ಬ್ರಿಟಿಷರ ಸಾಮರ್ಥ್ಯ, ತಂತ್ರ, ಕುತಂತ್ರ ಮತ್ತು ಚಾಣಾಕ್ಷ ನೀತಿಗಳನ್ನು ಸ್ಪಷ್ಟವಾಗಿ ಅರ್ಥಮಾಡಿಕೊಂಡಿದ್ದನು. ಬ್ರಿಟಿಷರಿಗೆ ವ್ಯಾಪಾರದಲ್ಲಿ ನಷ್ಟವಾದಲ್ಲಿ ಅದು ಅವರ ರಾಜಕೀಯ ಸ್ವಾಮ್ಯವನ್ನು ಕುಂದಿಸುತ್ತದೆ ಎಂದೂ ಅರಿತಿದ್ದ ಅವನು ಬ್ರಿಟಿಷರನ್ನು ವಿರೋಧಿಸುತ್ತಿದ್ದವರನ್ನು ಸಂಘಟಿಸುವ ಮತ್ತು ಅವರ ನೆರವನ್ನು ಅಪೇಕ್ಷಿಸಲು ಪ್ರಯತ್ನಿಸಿದನು. ಅವರಿಗೆ ವ್ಯಾಪಾರದಲ್ಲಿ ಲಾಭವಾಗದಂತೆ ನೋಡಿಕೊಳ್ಳುವ ಮೂಲಕ ವ್ಯಾಪಾರದ ಮೇಲೆ ಅವರು ಸಾಧಿಸಿದ್ದ ಏಕಸ್ವಾಮ್ಯವನ್ನು ಮುರಿಯುವ ಪ್ರಯತ್ನಗಳನ್ನು ನಡೆಸಿದನು. ಇವು ಬ್ರಿಟಿಷರಲ್ಲಿ ಟಿಪ್ಪುವಿನ ವಿರುದ್ಧ ಮತ್ತಷ್ಟು ದ್ವೇಷ ಭಾವನೆಗಳನ್ನು ಮೂಡಿಸಿದವು.

**ನಿಮಗಿದು ತಿಳಿದಿರಲಿ :**

*18ನೇ ಶತಮಾನದಲ್ಲಿ ಬ್ರಿಟಿಷ್ ಆಳ್ವಿಕೆಯ ವಿಸ್ತರಣೆಯನ್ನು ತಡೆಯಲು ಮಾಡಿದ ಪ್ರಯತ್ನಗಳಿಂದ ಹೈದರಾಲಿ ಮತ್ತು ಟಿಪ್ಪುಸುಲ್ತಾನರು ವಿಭಿನ್ನವಾಗಿ ಕಾಣುತ್ತಾರೆ. ಇವರಿಗೆ ಐರೋಪ್ಯರನ್ನು ಸಾಂಪ್ರದಾಯಿಕ ಶಸ್ತ್ರಾಸ್ತ್ರಗಳಿಂದ ಮಣಿಸಲಾಗುತ್ತದೆಂಬ ಅರಿವಿತ್ತು. ಫ್ರೆಂಚರ ಸಹಾಯದಿಂದ ಹೈದರಾಲಿ ಸೈನ್ಯವನ್ನು ಆಧುನೀಕರಿಸಲು ಯತ್ನಿಸಿದ್ದ. ಐರೋಪ್ಯ ಸೈನ್ಯದಂತೆ ಶಿಸ್ತಾಗಿ ಕವಾಯತು ಮಾಡುವ ಮತ್ತು ಬಂದೂಕನ್ನು ಬಳಸುವ ಪಡೆಗಳು ಮೈಸೂರಿನ ಸೈನ್ಯದಲ್ಲಿದ್ದವು. ಹೈದರಾಲಿ ಮತ್ತು ಟಿಪ್ಪುಸುಲ್ತಾನರು ಭಾರತದಲ್ಲಿ ಮೊದಲಬಾರಿಗೆ ಯುದ್ಧದಲ್ಲಿ ರಾಕೆಟ್‌ನ್ನು ಬಳಸಿದರು. ಸೈನ್ಯದ ಆಧುನೀಕರಣದ ಜೊತೆಗೆ ತುಂಬಿದ ರಾಜ್ಯದ ಬೊಕ್ಕಸ ಕೂಡಾ ಬ್ರಿಟಿಷರ ಆಕ್ರಮಣದ ತಡೆಗೆ ಅಗತ್ಯವೆನ್ನುವುದನ್ನು ಹೈದರಾಲಿ ಮತ್ತು ಟಿಪ್ಪು ಮನಗಂಡಿದ್ದರು. ಹೈದರಾಲಿಯ ಕಣ್ಣೆದುರಿಗೆ ಕರ್ನಾಟಕ ಪ್ರದೇಶದಲ್ಲಿದ್ದ ನವಾಬರು ದಿವಾಳಿಗಳಾಗಿದ್ದರು. ಅದುದರಿಂದ ಹೈದರಾಲಿ ಮತ್ತು ಟಿಪ್ಪು ಆರ್ಥಿಕ ವ್ಯವಸ್ಥೆಯನ್ನು ಬಲಗೊಳಿಸಲು ಅನೇಕ ನೀತಿ-ನಿಯಮಗಳನ್ನು ರೂಪಿಸಿದ್ದರು. ಶ್ರೀಗಂಧ ಮತ್ತು ತಂಬಾಕು ಮತ್ತಿತರ ಪದಾರ್ಥಗಳನ್ನು ರಾಜ್ಯದ ಏಕಸ್ವಾಮ್ಯದಡಿಗೆ ತಂದಿದ್ದರು. ಫ್ರೆಂಚ್ ತಂತ್ರಜ್ಞರನ್ನು ಕರೆಯಿಸಿ ಮೈಸೂರಿನ ಸಾಂಪ್ರದಾಯಿಕ ಕರಕುಶಲ ವಸ್ತುಗಳ ಗುಣಮಟ್ಟವನ್ನು ಹೆಚ್ಚಿಸಿ ಅಂತಾರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ವ್ಯಾಪಾರ ಚಟುವಟಿಕೆಗಳನ್ನು ವೃದ್ಧಿಸುವ ಯೋಜನೆಯಲ್ಲಿದ್ದರು.*

**ಮೂರನೆಯ ಆಂಗ್ಲೋ-ಮೈಸೂರು ಯುದ್ಧ :** ಈ ಯುದ್ಧಕ್ಕೆ ನೇರ ಕಾರಣ ಯಾವುದೆಂದರೆ ತಿರುವಾಂಕೂರು ರಾಜಕಾರಣಕ್ಕೆ ಸಂಬಂಧಿಸಿದ ಪ್ರಶ್ನೆ. ಆ ರಾಜ್ಯದ ರಾಜ ನೆರೆಯ ಕೊಚ್ಚಿ ಸಂಸ್ಥಾನದಲ್ಲಿ ಬ್ರಿಟಿಷರ ಬೆಂಬಲದಿಂದ ಕೋಟೆಯನ್ನು ನಿರ್ಮಿಸಿದನು ಮತ್ತು ಆತನು ಡಚ್ಚರಿಂದ ಆಯಕೋಟಾ ಮತ್ತು ಕಾಂಗನೂರು ಕೋಟೆಗಳನ್ನು ಪಡೆದುಕೊಂಡಿದ್ದನು. ಇದು ಮಂಗಳೂರು ಒಪ್ಪಂದದ ಷರತ್ತುಗಳ ಉಲ್ಲಂಘನೆಯಾಗಿತ್ತು.

ಬ್ರಿಟಿಷರು ಜನರಲ್ ಮೆಡೋಸನ ನಾಯಕತ್ವದಲ್ಲಿ ಕಾರವಾರ, ಕೊಯಮತ್ತೂರು, ದಿಂಡಿಗಲ್ ಮೊದಲಾದವುಗಳನ್ನು ವಶಪಡಿಸಿಕೊಂಡರು. ಇದಕ್ಕೆ ವಿರುದ್ಧವಾಗಿ ಟಿಪ್ಪು ಬಾರಾಮಹಲ್ ಪ್ರಾಂತ್ಯವನ್ನು

ಮುತ್ತಿ ಸತ್ಯಮಂಗಲವನ್ನು ವಶಪಡಿಸಿಕೊಂಡನು. ತಿರುಚನಾಪಳ್ಳಿಯನ್ನು ಮುತ್ತಿ ಅದನ್ನು ವಶಪಡಿಸಿಕೊಳ್ಳುವ ನಿಟ್ಟಿನಲ್ಲಿ ಆತನು ಸೈನಿಕ ಕಾರ್ಯಾಚರಣೆಗಳನ್ನು ನಡೆಸಿದನಾದರೂ ಅದು ಫಲ ನೀಡಲಿಲ್ಲ. ಈ ಸಮಯದಲ್ಲಿ ಲಾರ್ಡ್ ಕಾರ್ನ್‌ವಾಲೀಸ್ ಬ್ರಿಟಿಷ್ ಸೈನ್ಯದ ನಾಯಕತ್ವವನ್ನು ವಹಿಸಿಕೊಂಡನು. ಇದು ಯುದ್ಧದ ಗತಿಯನ್ನು ಬದಲಾಯಿಸಿತು.

ಬ್ರಿಟಿಷ್ ಸೈನ್ಯ ಕಾರ್ನ್‌ವಾಲೀಸನ ನೇತೃತ್ವದಲ್ಲಿ ಕೋಲಾರ ಮತ್ತು ಹೊಸಕೋಟೆಗಳನ್ನು ವಶಪಡಿಸಿಕೊಂಡು ಬೆಂಗಳೂರಿನತ್ತ ಮುನ್ನುಗ್ಗಿತು. ಬೆಂಗಳೂರನ್ನು ವಶಪಡಿಸಿಕೊಂಡು ಕೋಟೆಯನ್ನು ಹಾಳುಗೆಡವಿತು. ಬೆಂಗಳೂರನ್ನು ವಶಪಡಿಸಿಕೊಂಡ ಕಾರ್ನ್‌ವಾಲೀಸ್ ಟಿಪ್ಪುವಿನ ನಿರ್ನಾಮಕ್ಕಾಗಿ ನಿಜಾಮ ಮತ್ತು ಮರಾಠರ ನೆರವನ್ನು ಕೋರಿದನು. ನಿಜಾಮ ಮತ್ತು ಮರಾಠರ ಸಂಘಟಿತ ಸೈನ್ಯ ಬ್ರಿಟಿಷರೊಂದಿಗೆ ಸೇರುವುದರೊಂದಿಗೆ ಯುದ್ಧ ತಿರುವನ್ನು ಪಡೆದುಕೊಂಡಿತು. ಮರಾಠರು ಸವಣೂರು, ಗಜೇಂದ್ರಗಡ, ಲಕ್ಷ್ಮೇಶ್ವರ, ಹುಬ್ಬಳ್ಳಿ ಮೊದಲಾದವುಗಳನ್ನು ವಶಪಡಿಸಿಕೊಂಡರು.

1792ರಲ್ಲಿ ಸಂಘಟಿತ ಸೈನ್ಯ ಒಂದೊಂದಾಗಿ ಕೋಟೆಗಳನ್ನು ವಶಪಡಿಸಿಕೊಂಡು ಶ್ರೀರಂಗಪಟ್ಟಣದ ಕಡೆ ಸಾಗಿತು. ರಾತ್ರಿ ವೇಳೆಯಲ್ಲಿ ಕೋಟೆಯನ್ನು ಹಾಳುಗೆಡವಲಾಯಿತು. ಇದರಿಂದ ವಿಚಲಿತಗೊಂಡ ಟಿಪ್ಪು ಬ್ರಿಟಿಷರೊಂದಿಗೆ ಒಪ್ಪಂದವನ್ನು ಮಾಡಿಕೊಳ್ಳಲು ನಿರ್ಧರಿಸಿದನು. ಇದು ಆತನಿಗೆ ಅನಿವಾರ್ಯವೂ ಆಗಿತ್ತು. 1792ರಲ್ಲಿ ಅಸಮಾನ ಷರತ್ತುಗಳನ್ನು ಹೊಂದಿದ್ದ 'ಶ್ರೀರಂಗಪಟ್ಟಣ ಒಪ್ಪಂದ'ಕ್ಕೆ ಟಿಪ್ಪು ಸಹಿಹಾಕುವ ಮೂಲಕ ಯುದ್ಧಕ್ಕೆ ತೆರೆಯಾಯಿತು. ಈ ಒಪ್ಪಂದದನ್ವಯ ಮೂರನೆ ಆಂಗ್ಲೋ-ಮೈಸೂರು ಯುದ್ಧ ಕೊನೆಗೊಂಡಿತು.

ಟಿಪ್ಪುವನ್ನು ಮಣಿಸಲು ಬ್ರಿಟಿಷರು ಶ್ರೀರಂಗಪಟ್ಟಣ ಒಪ್ಪಂದದಲ್ಲಿ ಅಸಮಾನ ಷರತ್ತುಗಳು ಇರುವಂತೆ ನೋಡಿಕೊಂಡರು. ಆ ಷರತ್ತುಗಳು ಯಾವುವೆಂದರೆ; ಟಿಪ್ಪು ತನ್ನ ಅರ್ಧ ರಾಜ್ಯವನ್ನು ಬಿಟ್ಟುಕೊಡುವುದು, ಮೂರು ಕೋಟಿ ರೂಪಾಯಿಗಳನ್ನು ಯುದ್ಧನಷ್ಟ ಭರ್ತಿಯಾಗಿ ಕೊಡುವುದು, ಯುದ್ಧನಷ್ಟ ಭರ್ತಿಗೆ ಗ್ಯಾರಂಟಿಯಾಗಿ ತನ್ನ ಇಬ್ಬರು ಗಂಡು ಮಕ್ಕಳನ್ನು ಒತ್ತೆಯಾಗಿ ನೀಡುವುದು, ಮತ್ತು ಯುದ್ಧದ ಸಂದರ್ಭದಲ್ಲಿ ಸೆರೆ ಹಿಡಿಯಲಾಗಿದ್ದ ಸೈನಿಕರನ್ನು ಬಿಡುಗಡೆಗೊಳಿಸುವುದು. ಇದರನ್ವಯ ಶ್ರೀರಂಗಪಟ್ಟಣದಿಂದ ಬ್ರಿಟಿಷರ ನೇತೃತ್ವದಲ್ಲಿನ ಸಂಘಟಿತ ಸೈನ್ಯ ಹಿಂತೆಗೆಯಿತು.

**ನಾಲ್ಕನೆಯ ಆಂಗ್ಲೋ ಮೈಸೂರು ಯುದ್ಧ :** ಟಿಪ್ಪು ಮೂರನೆಯ ಆಂಗ್ಲೋ ಮೈಸೂರು ಯುದ್ಧದಲ್ಲಿನ ಸೋಲನ್ನು ವೈಯಕ್ತಿಕವಾಗಿ ಸ್ವೀಕರಿಸಿ ಅದನ್ನು ಒಂದು ಪ್ರಮುಖ ಸವಾಲೆಂದೇ ಪರಿಗಣಿಸಿದನು. ಒಪ್ಪಂದದನ್ವಯ ಬ್ರಿಟಿಷರ ನೇತೃತ್ವದಲ್ಲಿನ ಮಿತ್ರಕೂಟಕ್ಕೆ ನೀಡಬೇಕಾದ ಭೂಪ್ರದೇಶಗಳು ಮತ್ತು ಹಣವನ್ನು ಚಾಚೂ ತಪ್ಪದೆ ಸಲ್ಲಿಸಿ ಒತ್ತೆಯಾಳಾಗಿ ಕಳುಹಿಸಿಕೊಟ್ಟಿದ್ದ ತನ್ನ ಇಬ್ಬರು ಮಕ್ಕಳನ್ನು ಹಿಂದಕ್ಕೆ ಕರೆಯಿಸಿಕೊಂಡನು ಟಿಪ್ಪು ಬ್ರಿಟಿಷರ ಅಧೀನದಲ್ಲಿದ್ದ ಮಲೆಯಾಳಂ ಮಾತನಾಡುವ ಭೂಪ್ರದೇಶಗಳು ನ್ಯಾಯಯುತವಾಗಿ ತನಗೇ ಸೇರಬೇಕೆಂದು ವಾದಿಸಿದನು. ಆದರೆ ಬ್ರಿಟಿಷರು ಅದನ್ನು ಪುಷ್ಟೀಕರಿಸಲಿಲ್ಲ.

ಲಾರ್ಡ್ ವೆಲ್ಲೆಸ್ಲಿ 1798ರಲ್ಲಿ ಭಾರತದ ಗವರ್ನರ್ ಜನರಲ್‌ನಾಗಿ ನೇಮಕಗೊಂಡನು. ಟಿಪ್ಪುವಿನ ವಿರೋಧಿ ರಾಜಕೀಯ ಚಟುವಟಿಕೆಗಳು ಈತನ ಅವಧಿಯಲ್ಲಿ ಚುರುಕುಗೊಂಡವು. ಟಿಪ್ಪು ಭಾರತೀಯ ರಾಜರ ಒಕ್ಕೂಟವನ್ನು ತನ್ನೆಡೆಗೆ ಸೆಳೆಯಲು ಮಾಡುತ್ತಿದ್ದ ಪ್ರಯತ್ನಗಳು ಹಾಗೂ ತಮ್ಮ ಬದ್ಧ ವೈರಿಗಳಾದ ಫ್ರಂಚರೊಂದಿಗೆ ಟಿಪ್ಪು ಹೊಂದಿದ್ದ ಸಂಬಂಧಗಳು ವೆಲ್ಲೆಸ್ಲಿಯಲ್ಲಿ ಟಿಪ್ಪುವಿನ ವಿಚಾರದಲ್ಲಿ ಮತ್ತಷ್ಟು ದ್ವೇಷ ಭಾವನೆಗಳನ್ನು ಬೆಳೆಸಿದವು. ಟಿಪ್ಪು ಬ್ರಿಟಿಷರ ವಿರುದ್ಧವಾಗಿದ್ದ ಫ್ರೆಂಚರ ಸಹಕಾರ ಪಡೆಯಲು ಪ್ರಯತ್ನಿಸಿ ರಾಯಭಾರಿಯನ್ನು ಕಳುಹಿಸಿದ್ದನು. ಇದು ಬ್ರಿಟಿಷರಿಗೆ ಅಸಮಾಧಾನವನ್ನು ತಂದಿತು. ಟಿಪ್ಪು ಮತ್ತು ಫ್ರೆಂಚರ ನಡುವಿನ ಸ್ನೇಹ ಮುಂದಕ್ಕೆ ತಮ್ಮ ಅಧಿಪತ್ಯಕ್ಕೆ ಮುಳುವಾಗಬಹುದೆಂಬ ಭಾವನೆಗಳು ಬ್ರಿಟಿಷರಲ್ಲಿ ಬೆಳೆಯಿತು.


ಹೊಸ ಷರತ್ತಗಳನ್ನು ಒಳಗೊಂಡಿರುವ ಒಂದು ಒಪ್ಪಂದವನ್ನು ಟಿಪ್ಪುವಿನ ಮೇಲೆ ಹೇರಲಾಯಿತು. ಆದರೆ ಟಿಪ್ಪು ಅಮಾನವೀಯ ಮತ್ತು ಅಸಮಾನ ಷರತ್ತುಗಳನ್ನು ಒಳಗೊಂಡಿದ್ದ ಇದನ್ನು ಒಪ್ಪಿಕೊಳ್ಳಲು ನಿರಾಕರಿಸಿದನು. ಇದು ನಾಲ್ಕನೆಯ ಆಂಗ್ಲೋ-ಮೈಸೂರು ಯುದ್ಧವನ್ನು ಪ್ರಾರಂಭಿಸಿತು.



9

1799ರಲ್ಲಿ ಯುದ್ಧ ಆರಂಭವಾಯಿತು. ಅಭೇದ್ಯವಾದ ಕೋಟೆಯನ್ನು ಬ್ರಿಟಿಷರು ಭೇದಿಸಿದರು. ಎರಡೂ ಸೈನ್ಯಗಳು ವೀರಾವೇಶದಿಂದ ಕಾದಾಡಿದವು. ಟಿಪ್ಪು ತನ್ನ ಸೈನ್ಯವನ್ನು ಹುರಿದುಂಬಿಸುತ ಹೋರಾಡಿ 1799ರಲ್ಲಿ ಹತನಾದನು. ಆತನ ಮರಣ ಬ್ರಿಟಿಷರಿಗೆ ಇಡೀ ಭಾರತವೇ ತಮ್ಮ ಕೈವಶವಾದ ಸಂತೋಷವನ್ನು ತಂದಿತು. ನಂತರ ಬ್ರಿಟಿಷರು ಆತನ ಹತೋಟಿಯಲ್ಲಿದ್ದ ಭೌಗೋಳಿಕ ಪ್ರದೇಶಗಳನ್ನು ಮರಾಠರು ಮತ್ತು ನಿಜಾಮನೊಂದಿಗೆ ಹಂಚಿಕೊಂಡರು. ಒಂದು ಸಣ್ಣ ಭೌಗೋಳಿಕ ಪ್ರದೇಶವು ಮೈಸೂರು ಒಡೆಯರ ರಾಜವಂಶದ ಪ್ರತಿನಿಧಿಗೆ ವರ್ಗಾಯಿಸಲ್ಪಟ್ಟಿತ್ತು. ಈ ಪ್ರದೇಶ ತರುವಾಯ ಮೈಸೂರು ಸಂಸ್ಥಾನವೆಂದು ಹೆಸರಾಯಿತು.

**ಟಿಪ್ಪು ನಂತರದ ಮೈಸೂರು**




## ದೋಂಡಿಯಾ ವಾಘ್ (1800)

ಆಧುನಿಕ ಕರ್ನಾಟಕದ ಚರಿತ್ರೆಯಲ್ಲಿ ಟಿಪ್ಪುವಿನ ನಂತರ ಅದರಲ್ಲಿಯೂ ಮುಖ್ಯವಾಗಿ 19ನೆಯ ಶತಮಾನದ ಪೂರ್ವಾರ್ಧದಲ್ಲಿ ಬ್ರಿಟಿಷ್ ಆಳ್ವಿಕೆಯ ವಿರುದ್ಧ ಕಂಡುಬಂದ ಪ್ರತಿಭಟನೆಗಳು ಮತ್ತು ಬಂಡಾಯಗಳು ಪ್ರಮುಖ ಸ್ಥಾನವನ್ನು ಪಡೆದುಕೊಂಡಿವೆ. ಇವುಗಳು ಸಶಸ್ತ್ರ ಬಂಡಾಯಗಳಾಗಿದ್ದವು. ಈ ಸಶಸ್ತ್ರ ಬಂಡಾಯಗಳಲ್ಲಿ ದೋಂಡಿಯಾ ವಾಘ್‌ನ ನಾಯಕತ್ವದಲ್ಲಿ ಕಂಡುಬಂದಿದ್ದ ಸಶಸ್ತ್ರ ದಂಗೆ ಪ್ರಮುಖವಾಗಿದೆ.

ದೋಂಡಿಯಾ ಚನ್ನಗಿರಿಯ ಮರಾಠ ಕುಟುಂಬದಲ್ಲಿ ಜನಿಸಿದನು. ಅವನ ಶೌರ್ಯ ಪರಾಕ್ರಮಗಳಿಂದ ಜನ ಅವನನ್ನು ವಾಘ್ ಎಂದು ಕರೆದರು. ಮರಾಠಿಯಲ್ಲಿ ವಾಘ್ ಎಂದರೆ ಹುಲಿ. ಕ್ರಿ.ಶ.1789ರ ಸುಮಾರಿಗೆ ಮೈಸೂರಿನ ಹೈದರಾಲಿಯ ಸೈನ್ಯದಲ್ಲಿ ಒಬ್ಬ ಅಶ್ವಾರೋಹಿ ಸೈನಿಕನಾಗಿ ಸೇರಿ ಕಾಲಾನಂತರ ಸೇನಾನಾಯಕನಾದನು. ಖಾಸಗಿಯಾಗಿ ಒಂದು ಸೈನ್ಯವನ್ನು ಸಜ್ಜುಗೊಳಿಸಿದ ಅವನು ಟಿಪ್ಪುವಿನ ಸೈನ್ಯದಲ್ಲಿ ಸೇವೆ ಸಲ್ಲಿಸಿದನು. ಆತನೊಂದಿಗೆ ಮನಸ್ತಾಪದಿಂದಾಗಿ ಅವನು ಸೆರೆಮನೆ ಸೇರುವಂತಾಯಿತು. ನಾಲ್ಕನೆಯ ಆಂಗ್ಲೋ ಮೈಸೂರು ಯುದ್ಧದ ಸಮಯದಲ್ಲಿ ಶ್ರೀರಂಗಪಟ್ಟಣದ ಪತನಾನಂತರ ಬ್ರಿಟಿಷರು ಈತನನ್ನು ಸೆರೆಮನೆಯಿಂದ ಬಿಡುಗಡೆಗೊಳಿಸಿದರು. ತರುವಾಯ ಇವನು ಒಂದು ಸೈನ್ಯವನ್ನು ಸಂಘಟಿಸಿ ಸೈನಿಕ ಕಾರ್ಯಾಚರಣೆಗಳನ್ನು ಪ್ರಾರಂಭಿಸಿದನು.


ಅನುಬಂಧ - ೭

6ನೇ ತರಗತಿ ಸಮಾಜ ವಿಜ್ಞಾನ ಭಾಗ-1

(ಪರಿಷ್ಕೃತ 2023-24)

## 1.2 ಮೈಸೂರು ವಿಭಾಗ

ನಮ್ಮ ನಾಡಿನ ಮತ್ತೊಂದು ಆಡಳಿತ ವಿಭಾಗವೆಂದರೆ ಮೈಸೂರು ವಿಭಾಗ. ಮೈಸೂರು ಆರಂಭದಲ್ಲಿ ಒಡೆಯರ್ ರಾಜ್ಯದ ರಾಜಧಾನಿಯಾಗಿತ್ತು. ಈ ವಿಭಾಗದಲ್ಲಿ ಎಂಟು ಜಿಲ್ಲೆಗಳಿವೆ. ಅವು ಮೈಸೂರು, ಮಂಡ್ಯ, ಹಾಸನ, ಚಿಕ್ಕಮಗಳೂರು, ಉಡುಪಿ, ದಕ್ಷಿಣಕನ್ನಡ, ಚಾಮರಾಜನಗರ ಮತ್ತು ಕೊಡಗು. ಈ ವಿಭಾಗದ ಆಡಳಿತ ಕೇಂದ್ರ ಮೈಸೂರು. ಈ ವಿಭಾಗವು ನದಿಗಳಿಗೆ, ಪರ್ವತ ಶ್ರೇಣಿಗಳಿಗೆ, ಅರಣ್ಯಗಳಿಗೆ, ವನ್ಯಮೃಗಗಳಿಗೆ, ಕಾಫಿ ತೋಟಗಳಿಗೆ, ಕರಾವಳಿಗೆ, ಬಂದರುಗಳಿಗೆ ಪ್ರಸಿದ್ಧವಾಗಿದೆ.



ಮೈಸೂರು ವಿಭಾಗದ ಜಿಲ್ಲಾವಾರು ಭೂಪಟ

### 1.2.1 ಚಾರಿತ್ರಿಕ ಹಿನ್ನೆಲೆ

ಮೈಸೂರಿನ ರಾಜೇತಿಹಾಸ, ಸ್ಪಷ್ಟವಾಗಿ ಆರಂಭವಾಗುವುದು ಗಂಗರ ಕಾಲದಿಂದ. ತಲಕಾಡು ಗಂಗರ ರಾಜಧಾನಿಯಾಗಿತ್ತು. ಅನಂತರ ಚೋಳರು, ಹೊಯ್ಸಳರು ಮತ್ತು ವಿಜಯನಗರದ ಅರಸರು ಮೈಸೂರು ಪ್ರದೇಶದಲ್ಲಿ ಆಳ್ವಿಕೆ ನಡೆಸಿದರು.


ಚಿಕ್ಕದೇವರಾಜ ಒಡೆಯರ್

ಮೈಸೂರು ಅನೇಕ ಶತಮಾನಗಳ ಕಾಲ ಒಡೆಯರ್ ಅವರ ಮನೆತನದ ಆಳ್ವಿಕೆಯಲ್ಲಿತ್ತು. ಕೆಲವು ವರ್ಷಗಳ ಕಾಲ ಅದು ಹೈದರಾಲಿ ಮತ್ತು ಅವರ ಮಗ ಟಿಪ್ಪೂಸುಲ್ತಾನ್ ಅವರುಗಳ ಆಡಳಿತದ ವಶದಲ್ಲಿತ್ತು. ಚಾರಿತ್ರಿಕವಾಗಿ ಮತ್ತು ಪೌರಾಣಿಕವಾಗಿ ಮೈಸೂರನ್ನು ಮಹಿಷನಾಡು ಎಂದು ಕರೆಯಲಾಗುತ್ತದೆ. ಪುರಾಣ ಕಥೆಯ ಪ್ರಕಾರ ದೇವಿ ಪಾರ್ವತಿಯು ಚಾಮುಂಡೇಶ್ವರಿ ರೂಪ ಧರಿಸಿ, ರಾಕ್ಷಸನಾಗಿದ್ದ ಮಹಿಷಾಸುರನನ್ನು ಸಂಹರಿಸಿದಳು. ಮಹಿಷಾಸುರನನ್ನು ಸಂಹರಿಸಿದ ಸ್ಥಳವೇ ಮೈಸೂರಾಯಿತು. ಯದುರಾಯ ಅನ್ನುವವರು ಒಡೆಯರ್ ಮನೆತನದ ಮೊದಲ ಅರಸು. ಚಿಕ್ಕದೇವರಾಜ ಒಡೆಯರ್ ಅವರು ಪ್ರಸಿದ್ಧ ದೊರೆಯಾಗಿದ್ದರು. ಅವರ ನಂತರ ಸಿಂಹಾಸನಕ್ಕೆ ಬಂದ ಅರಸರು ದುರ್ಬಲರಾಗಿದ್ದರು.

ಆ ಸಮಯದಲ್ಲಿ ಸೇನಾಧಿಪತಿಯಾಗಿದ್ದ ಹೈದರಾಲಿಯು ಆಳ್ವಿಕೆಯನ್ನು ಅಕ್ರಮವಾಗಿ ವಶಪಡಿಸಿಕೊಂಡ. ಅವನು ಮತ್ತು ಅವನ ಮಗ ಟಿಪ್ಪೂಸುಲ್ತಾನ್ 1761 ರಿಂದ 1799 ರವರೆಗೆ ಆಡಳಿತ ನಡೆಸಿದರು.

ಟಿಪ್ಪೂಸುಲ್ತಾನನ ಮರಣದ ನಂತರ ಮೈಸೂರಿನ ಆಡಳಿತವು ಮತ್ತೆ ಒಡೆಯರ ಕೈಗೆ ಬಂತು. ಬ್ರಿಟಿಷರು 1831ರಲ್ಲಿ ಆಡಳಿತವನ್ನು ತಮ್ಮ ವಶಕ್ಕೆ ತೆಗೆದುಕೊಂಡರು. ಆದರೆ 1881ರಲ್ಲಿ ಮತ್ತೆ ಆಳ್ವಿಕೆಯನ್ನು ಒಡೆಯರ ವಶಕ್ಕೆ ನೀಡಿದರು. ಕಳೆದ 20ನೆಯ ಶತಮಾನದ ಆದಿ ಭಾಗದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತದಲ್ಲಿ ಅನೇಕ ಜನಪರ ಕಾರ್ಯಗಳಾದವು ವಿಶೇಷವಾಗಿ ಶಿಕ್ಷಣ, ಸಂಸ್ಕೃತಿ, ನೀರಾವರಿಗೆ ಇವರು ಆದ್ಯತೆ ನೀಡಿದರು. ಸರ್. ಎಮ್. ವಿಶ್ವೇಶ್ವರಯ್ಯ ಮತ್ತು ಸರ್. ಮಿರ್ಜಾ ಇಸ್ಮಾಯಿಲ್ ಅವರ ದಿವಾನಗಿರಿಯಲ್ಲಿ ಮೈಸೂರು ಅಪೂರ್ವ ಯಶಸ್ಸನ್ನು ಪಡೆಯಿತು. 1947ರಲ್ಲಿ ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಮೈಸೂರು ಸಂಸ್ಥಾನವು ಭಾರತ ಗಣರಾಜ್ಯದಲ್ಲಿ ವಿಲೀನಗೊಂಡಿತು.


ನಾಲ್ವಡಿ ಕೃಷ್ಣರಾಜ ಒಡೆಯರ್


ಸರ್. ಎಮ್. ವಿಶ್ವೇಶ್ವರಯ್ಯ


ಸರ್. ಮಿರ್ಜಾ ಇಸ್ಮಾಯಿಲ್

ಈ ವಿಭಾಗದ ಬೇರೆ ಬೇರೆ ಜಿಲ್ಲೆಗಳಲ್ಲಿ ವಿವಿಧ ರಾಜ ಮನೆತನಗಳು ಆಳ್ವಿಕೆ ನಡೆಸಿದ ಚರಿತ್ರೆಯಿದೆ. ಕೊಡಗು ಪ್ರದೇಶದಲ್ಲಿ ಅನೇಕ ರಾಜ ಮನೆತನಗಳು ಆಡಳಿತ ನಡೆಸಿದವು. ಹಾಲೇರಿ ಮನೆತನವು 17ನೆಯ ಶತಮಾನದಲ್ಲಿ ತನ್ನ ಆಳ್ವಿಕೆಯನ್ನು ಸ್ಥಾಪಿಸಿತು. ಬಿದನೂರು ಇವರ ರಾಜಧಾನಿಯಾಗಿತ್ತು. ಹಾಲೇರಿ ಅರಸರಲ್ಲಿ ದೊಡ್ಡವೀರಪ್ಪ ಪ್ರಸಿದ್ಧ ದೊರೆ. ಚಿಕ್ಕವೀರರಾಜ ಕೊನೆಯ ಅರಸ. ಇವನು ದುರ್ಬಲನಾಗಿದ್ದ. ಇದನ್ನು ಬಳಸಿಕೊಂಡು ಬ್ರಿಟಿಷರು ಆಡಳಿತವನ್ನು ತಮ್ಮ ವಶಕ್ಕೆ ತೆಗೆದುಕೊಂಡರು. ಸ್ವಾತಂತ್ರ್ಯಾನಂತರ ಕೊಡಗು ಪ್ರತ್ಯೇಕ ರಾಜ್ಯವಾಗಿತ್ತು. ಆದರೆ 1956ರಲ್ಲಿ ಅದು ಕರ್ನಾಟಕದಲ್ಲಿ ವಿಲೀನಗೊಂಡಿತು. ಕೆಳದಿ ಸಂಸ್ಥಾನ ಮತ್ತೊಂದು ರಾಜಮನೆತನವಾಗಿದೆ.

ಕರ್ನಾಟಕದ ಕರಾವಳಿ ಪ್ರದೇಶವನ್ನು ತುಳುನಾಡು ಎಂದು ಕರೆಯುತ್ತಿದ್ದರು. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳನ್ನು ಒಳಗೊಂಡ ತುಳುನಾಡಲ್ಲಿ 7ನೆಯ ಶತಮಾನದಿಂದ 14ನೆಯ ಶತಮಾನದವರೆಗೆ ಅಳುಪ ಮನೆತನದ ಅರಸರು ಆಳ್ವಿಕೆ ನಡೆಸಿದರು. ಬೇರೆ ಬೇರೆ ಕಾಲಘಟ್ಟಗಳಲ್ಲಿ ಉದ್ಯಾವರ, ಮಂಗಲಪುರ, ಹುಂಚ ಮತ್ತು ಬನವಾಸಿಗಳು ಅಳುಪರ ರಾಜಧಾನಿಗಳಾಗಿದ್ದವು. ತುಳುನಾಡಿನಲ್ಲಿ ಅನೇಕ ಪಾಳೆಗಾರರು ಆಡಳಿತ ನಡೆಸಿದರು. ಅವರಲ್ಲಿ ಪ್ರಸಿದ್ಧರಾದವರೆಂದರೆ ಪುತ್ತಿಗೆಯ ಚೌಟರು, ಬಂಗವಾಡಿಯ ಬಂಗರು, ಕಾರ್ಕಳದ ಬೈರವರಸರು, ಕಾಸರಗೋಡಿನ ಕುಂಬಳೆ ಅರಸರು ಮುಂತಾದವರು.

7th [2023-24]

7ನೇ ತರಗತಿ ಸಮಾಜ ವಿಜ್ಞಾನ ಭಾಗ-1

(ಪರಿಷ್ಕೃತ 2023-24)

**ಬ್ರಿಟಿಷರೊಂದಿಗೆ ಹೋರಾಟ:** ವ್ಯಾಪಾರಿಗಳಾಗಿ ಭಾರತಕ್ಕೆ ಬಂದಿದ್ದ ಬ್ರಿಟಿಷರು ಕ್ರಮೇಣ ರಾಜಕೀಯ ಶಕ್ತಿಯಾಗಿ ಎದ್ದುನಿಂತರು. ಹೈದರ್ ದಕ್ಷಿಣ ಭಾರತದಲ್ಲಿ ರಾಜ್ಯ ವಿಸ್ತರಣೆ ಮಾಡುವುದನ್ನು ಅವರು ಸಹಿಸದಾದರು. ಹೀಗಾಗಿ ಹೈದರ್ ಮತ್ತು ಬ್ರಿಟಿಷರ ನಡುವೆ ಸಂಘರ್ಷ ಅನಿವಾರ್ಯವಾಯಿತು.

ಹೈದರ್ ಮತ್ತು ಅವನ ಮಗನಾದ ಟಿಪ್ಪು ಸುಲ್ತಾನ್ ಬ್ರಿಟಿಷರೊಡನೆ ಮಾಡಿದ ನಾಲ್ಕು ಯುದ್ಧಗಳನ್ನು 'ಮೈಸೂರು ಯುದ್ಧಗಳು' ಅಥವಾ 'ಆಂಗ್ಲೋ-ಮೈಸೂರು ಯುದ್ಧಗಳು' ಎನ್ನುವರು.

**ಮೊದಲನೆಯ ಮೈಸೂರು ಯುದ್ಧದಲ್ಲಿ** ಬ್ರಿಟಿಷರು ಅಪಾರ ಹಾನಿಗೊಳಗಾದರು. ವಿಜಯಗಳಿಸಿದ ಹೈದರನ ಘನತೆ ಹೆಚ್ಚಿತು.

ಇದೇ ವೇಳೆ ಮರಾಠರು ಕೂಡ ದಕ್ಷಿಣ ಭಾರತದಲ್ಲಿ ಪ್ರಬಲ ರಾಜಕೀಯ ಶಕ್ತಿಯಾಗಿದ್ದರು. ಮರಾಠರು ಮೈಸೂರನ್ನು ಆಕ್ರಮಣ ಮಾಡಿದ ಸಂದರ್ಭದಲ್ಲಿ ಬ್ರಿಟಿಷರು ಹೈದರನ ಸಹಾಯಕ್ಕೆ ಬರತಕ್ಕದ್ದು ಎಂಬುದಾಗಿ ಒಪ್ಪಂದ ಮಾಡಿಕೊಳ್ಳಲಾಗಿತ್ತು. ಆದರೆ ಮರಾಠರು ಮೈಸೂರನ್ನು ಆಕ್ರಮಣ ಮಾಡಿದಾಗ ಬ್ರಿಟಿಷರು ಒಪ್ಪಂದವನ್ನು ಮುರಿದು ತಟಸ್ಥರಾದರು. ಇದರಿಂದ ಹೈದರ್ ಸಿಡಿಮಿಡಿಗೊಂಡು ಬ್ರಿಟಿಷರನ್ನು ಯುದ್ಧಕ್ಕೆಳೆದ. ಈ ಯುದ್ಧವೇ ಎರಡನೆಯ ಮೈಸೂರು ಯುದ್ಧ. ಯುದ್ಧ ನಡೆಯುತ್ತಿದ್ದಂತೆ ಹೈದರ್ ಮರಣವನ್ನಪ್ಪಿದ. ಯುದ್ಧವನ್ನು ಟಿಪ್ಪು ಸುಲ್ತಾನ್ ಮುಂದುವರಿಸಿದ.

**ಹೈದರ್ ಅಲಿಯ ಸಾಧನೆ:** ಹೈದರನಿಗೆ ಓದುಬರಹ ಬರುತ್ತಿರಲಿಲ್ಲವಾದರೂ ಕನ್ನಡ ಸೇರಿದಂತೆ ಹಲವು ಭಾಷೆಗಳನ್ನು ಚೆನ್ನಾಗಿ ಬಲ್ಲವನಾಗಿದ್ದ. ಅವನು ಮೈಸೂರು ರಾಜ್ಯದ ವಿಸ್ತಾರವನ್ನು ಇಮ್ಮಡಿಗೊಳಿಸಿದ. ಶೂರ ಯೋಧನೂ ದಕ್ಷ ಆಡಳಿತಗಾರನೂ ಆಗಿದ್ದ ಹೈದರ್ ಅಲಿಗೆ ಕರ್ನಾಟಕದ ಇತಿಹಾಸದಲ್ಲಿ ಪ್ರಮುಖ ಸ್ಥಾನವಿದೆ. ಬೆಂಗಳೂರಿನ ಸುಂದರ ಉದ್ಯಾನವನ ಲಾಲ್‌ಬಾಗ್ ಅವನಿಂದಲೇ ಆರಂಭ ಆದುದು.

**ಟಿಪ್ಪು ಸುಲ್ತಾನ್**



ಟಿಪ್ಪು ಸುಲ್ತಾನ್

ತನ್ನ ತಂದೆಯ ಕಾಲದ ಯುದ್ಧಗಳಲ್ಲಿ ಪಾಲ್ಗೊಂಡು ವಿಜಯವನ್ನು ಗಳಿಸಿದ ಟಿಪ್ಪು ಸುಲ್ತಾನ್ ಧೀರ ತರುಣನಾಗಿದ್ದ. ತನ್ನನ್ನು ಸುಲ್ತಾನನೆಂದು ಘೋಷಿಸಿ ತನ್ನ ರಾಜ್ಯ 'ದೈವದತ್ತ'ವೆಂದು ಪ್ರಕಟಿಸಿಕೊಂಡ.

ತಂದೆಯ ಮರಣಾನಂತರ ಆಗ ನಡೆಯುತ್ತಿದ್ದ ಯುದ್ಧವನ್ನು ಟಿಪ್ಪು ಮುಂದುವರಿಸಿದ. ಆತನ ಸಹಾಯಕ್ಕೆ ಯಾರೂ ಬರಲಿಲ್ಲ. ಟಿಪ್ಪು ಏಕಾಂಗಿಯಾಗಿ ಬ್ರಿಟಿಷರನ್ನು ಎದುರಿಸಲಾರದೆ



(3)

**ಮಂಗಳೂರಿನಲ್ಲಿ ಒಪ್ಪಂದ** ಮಾಡಿಕೊಂಡ. ಮಂಗಳೂರು ಒಪ್ಪಂದ ಉಭಯ ಪಕ್ಷದವರಿಗೂ ಹಿತಕರವಾಗಿದ್ದಿತು. ಇಬ್ಬರೂ ಗೆದ್ದಿದ್ದ ಪ್ರದೇಶಗಳನ್ನು ಬಿಟ್ಟುಕೊಟ್ಟು ಯುದ್ಧಖೈದಿಗಳನ್ನು ಹಿಂತಿರುಗಿಸಿದರು.

ಅಲ್ಪಕಾಲದಲ್ಲೇ ಟಿಪ್ಪು ಮತ್ತು ಬ್ರಿಟಿಷ್ ನಡುವೆ ಇನ್ನೆರಡು ಯುದ್ಧಗಳು ನಡೆದುವು. ಟಿಪ್ಪು ಮತ್ತು ಬ್ರಿಟಿಷರ ನಡುವಣ ಪರಸ್ಪರ ದ್ವೇಷ ಮತ್ತು ಅಪನಂಬಿಕೆಯೇ ಈ ಯುದ್ಧಗಳಿಗೆ ಮೂಲ ಕಾರಣವಾಗಿತ್ತು.

**ಮೂರನೆಯ ಮೈಸೂರು ಯುದ್ಧದಲ್ಲಿ** ಬ್ರಿಟಿಷರು ಆಕ್ರಮಣ ಮಾಡುತ್ತಾ ರಾಜಧಾನಿಯಾದ ಶ್ರೀರಂಗಪಟ್ಟಣವನ್ನು ಮುತ್ತಿಗೆ ಹಾಕಿದರು. ಬೇರೆ ಮಾರ್ಗ ತೋಚದೆ ಟಿಪ್ಪು ಬ್ರಿಟಿಷರೊಡನೆ ಶಾಂತಿ ಒಪ್ಪಂದ ಮಾಡಿಕೊಂಡನು. ಶಾಂತಿ ಒಪ್ಪಂದದಂತೆ ಅವನು ಅರ್ಧರಾಜ್ಯವನ್ನು ಬ್ರಿಟಿಷರಿಗೆ ಒಪ್ಪಿಸಿದನು. ಅಪಾರ ಪರಿಹಾರ ಧನವನ್ನು ಅವರಿಗೆ ನೀಡಬೇಕಾಯಿತು. ತನ್ನಿಬ್ಬರು ಮಕ್ಕಳನ್ನು ಕೂಡ ಬ್ರಿಟಿಷರಿಗೆ ಒತ್ತೆಯಾಳಾಗಿ ಕೊಡಬೇಕಾಯಿತು.

ಯುದ್ಧದ ಪರಿಣಾಮವಾಗಿ ಟಿಪ್ಪು ಅವಮಾನಗೊಂಡನು. ಬ್ರಿಟಿಷರನ್ನು ಭಾರತದಿಂದ ಹೊರದಬ್ಬಲು ದೃಢಸಂಕಲ್ಪ ಮಾಡಿದನು. ಇದು **ನಾಲ್ಕನೆಯ ಮೈಸೂರು ಯುದ್ಧಕ್ಕೆ** ನಾಂದಿಯಾಯಿತು. ಯುದ್ಧದಲ್ಲಿ ಶ್ರೀರಂಗಪಟ್ಟಣವು ಮುತ್ತಿಗೆಗೊಳಗಾಯಿತು.

ಟಿಪ್ಪು ವೀರಾವೇಶದಿಂದ ಹೋರಾಡಿ ಅಸುನೀಗಿದ. ಟಿಪ್ಪುವು 'ಮೈಸೂರಿನ ಹುಲಿ'ಯೆಂದು ಪ್ರಸಿದ್ಧನಾಗಿದ್ದಾನೆ.

ಟಿಪ್ಪು ಸುಲ್ತಾನನ ಮರಣಾನಂತರ ಮೈಸೂರು ರಾಜ್ಯ ಬ್ರಿಟಿಷರ ವಶವಾಯಿತು, ಬ್ರಿಟಿಷರು ಒಡೆಯರ ರಾಜವಂಶದ ಮುಮ್ಮಡಿ ಕೃಷ್ಣರಾಜ ಒಡೆಯರಿಗೆ ರಾಜ್ಯವನ್ನು ಹಸ್ತಾಂತರಿಸಿದರು. ಆದರೆ ಮೈಸೂರು ಬ್ರಿಟಿಷರ ಆಶ್ರಿತ ರಾಜ್ಯವಾಯಿತು.



(4)

10th [2023-24]

ಹತ್ತನೇ ತರಗತಿ ಸಮಾಜ ವಿಜ್ಞಾನ ಭಾಗ-1

(ಪರಿಷ್ಕೃತ - 2023-24)

1780ರಲ್ಲಿ ಎರಡನೆಯ ಮೈಸೂರು ಯುದ್ಧ ಪ್ರಾರಂಭವಾಯಿತು. ಯುದ್ಧದ ಪ್ರಾರಂಭದಲ್ಲಿ ಹೈದರ್ ಮುನ್ನಡೆ ಸಾಧಿಸಿದನು. ಕರ್ನಾಟಕ ಪ್ರಾಂತ್ಯದ ಅನೇಕ ಕೋಟೆಗಳನ್ನು ವಶಪಡಿಸಿಕೊಂಡನು. ಕಾಂಚೀಪುರಂ ವಶವಾಯಿತು. ಕೋರಮಂಡಲ ತೀರದವರೆವಿಗೂ ತನ್ನ ಸೈನ್ಯವನ್ನು ಮುನ್ನುಗ್ಗಿಸಿದನು. ಇದು ಮದರಾಸಿನ ಬ್ರಿಟಿಷ್ ಸೈನ್ಯಾಧಿಕಾರಿಗಳಲ್ಲಿ ನಡುಕವನ್ನು ತಂದಿತು. ಹೈದರ್ ಆರ್ಕಾಟಿಗೆ ಮುತ್ತಿಗೆ ಹಾಕಿ ಅದನ್ನು ವಶಪಡಿಸಿಕೊಂಡನು. ಸರ್ ಐರ್‌ಕೂಟ್‌ನ ನೇತೃತ್ವದಲ್ಲಿ ಬ್ರಿಟಿಷರ ಸೈನ್ಯ ಸಜ್ಜುಗೊಂಡಿತು. ಹೈದರ್ ಈ ಅವಧಿಯಲ್ಲಿ ವೆಲ್ಲೂರು ಮತ್ತು ವಾಂಡಿವಾಶ್‌ಗಳನ್ನು ಮುತ್ತುವುದಾಗಿ ಬೆದರಿಸಿದನು. ಹೈದರನ ಸೈನ್ಯವನ್ನು ಸರ್ ಐರ್‌ಕೂಟ್ ಪಾಂಡಿಚೇರಿಯವರೆವಿಗೂ ಹಿಂಬಾಲಿಸಿದನು. ಫ್ರೆಂಚರು ಹೈದರನಿಗೆ ಬ್ರಿಟಿಷರ ವಿರುದ್ಧ ಸಹಕರಿಸಲು ನಿರಾಕರಿಸಿದರು. ಹೈದರ್. ಇದರಿಂದಾಗಿ ಯುದ್ಧಗತಿಯನ್ನು ಬದಲಿಸಿದನು. ಹೈದರ್ ಬ್ರಿಟಿಷರ ಹತೋಟಿಯಲ್ಲಿನ ಪ್ರದೇಶಗಳಿಗೆ ಮುತ್ತಿಗೆ ಹಾಕಿ ಕೊಳ್ಳೆಹೊಡೆದು ಅಪಾರ ಸಂಪತ್ತು ಮತ್ತು ಶಸ್ತ್ರಾಸ್ತ್ರಗಳನ್ನು ಸಂಗ್ರಹಿಸಿದನು.

1781ರಲ್ಲಿ ಪೋರ್ಟೋನೋವೆ ಎಂಬಲ್ಲಿ ನಡೆದ ಕದನದಲ್ಲಿ ಹೈದರ್ ಪರಾಭವಗೊಂಡನು. ಇದು ಯುದ್ಧದ ಗತಿಯನ್ನು ಬದಲಾಯಿಸಿತು ಮತ್ತು ಬ್ರಿಟಿಷರಲ್ಲಿ ಸ್ಥೈರ್ಯವನ್ನು ಹೆಚ್ಚಿಸಿತು. ತರುವಾಯ ಪುಲಿಕಾಟ್ ಮತ್ತು ಸೋಲಿಂಗೂರ್‌ಗಳ ಕದನದಲ್ಲಿಯೂ ಆರ್ಥಿಕ ಹಾನಿ ಅನುಭವಿಸಿದನು. ಈ ವೇಳೆಗೆ ಬ್ರಿಟಿಷರು ಸಾಲ್ಬಾಯ್ ಒಪ್ಪಂದಕ್ಕೆ ಸಹಿ ಹಾಕುವ ಮೂಲಕ ಹೈದರನ ಒಕ್ಕೂಟದಿಂದ ಮರಾಠರು ಹಾಗೂ ನಿಜಾಮನನ್ನು ಸೆಳೆಯುವಲ್ಲಿ ಸಫಲರಾದರು. ಯುದ್ಧದ ಮಧ್ಯದಲ್ಲಿ ಹೈದರಾಲಿ 1782ರಲ್ಲಿ ಅನಾರೋಗ್ಯದಿಂದ ಮೃತನಾದನು. ಆತನ ಮಗ ಟಿಪ್ಪು ಯುದ್ಧವನ್ನು ಮುನ್ನಡೆಸಿದನು.

ಹೈದರನ ಮರಣ ಸಂದರ್ಭದಲ್ಲಿ ಮಲಬಾರ್ ಪ್ರಾಂತ್ಯದಲ್ಲಿ ನಡೆದ ಯುದ್ಧದಲ್ಲಿ ಟಿಪ್ಪು ತೊಡಗಿದ್ದನು. ಟಿಪ್ಪುವಿನ ಅನುಪಸ್ಥಿತಿಯ ಲಾಭ ಪಡೆದ ಬ್ರಿಟಿಷರು ಬಿದನೂರು ಮತ್ತು ಮಂಗಳೂರನ್ನು ವಶಪಡಿಸಿಕೊಳ್ಳಲು ಹವಣಿಸಿದರು. ತಿರುವಾಂಕೂರು, ಕಲ್ಲಿಕೋಟೆ ಮತ್ತು ಮಲಬಾರಿನ ಅನೇಕ ರಾಜರುಗಳನ್ನು ಟಿಪ್ಪುವಿನ ವಿರುದ್ಧ ಎತ್ತಿಕಟ್ಟುವ ಪ್ರಯತ್ನಗಳನ್ನು ಅವರು ನಡೆಸಿದರು. ಹೀಗಾಗಿ ಟಿಪ್ಪು ಮಂಗಳೂರು ಮತ್ತು ಕರಾವಳಿ ತೀರಪ್ರದೇಶದ ಮೇಲೆ ಹತೋಟಿ ಸಾಧಿಸುವುದು ಸೂಕ್ತವೆಂದು ಯೋಚಿಸಿ ಮಂಗಳೂರಿನತ್ತ ಮುನ್ನಡೆದು ಬ್ರಿಟಿಷರ ಸೈನ್ಯವನ್ನು ಸೋಲಿಸಿದನು. ಕೊನೆಗೆ 1784ರ 'ಮಂಗಳೂರು ಒಪ್ಪಂದ'ದ ಮೂಲಕ ಎರಡನೆಯ ಆಂಗ್ಲೋ-ಮೈಸೂರು ಯುದ್ಧ ಕೊನೆಗೊಂಡಿತು.



ಟಿಪ್ಪು ಸುಲ್ತಾನ

### ಟಿಪ್ಪು ಸುಲ್ತಾನ

ಬ್ರಿಟಿಷರನ್ನು ತನ್ನ ರಾಜ್ಯ ವಿಸ್ತರಣೆಯ ನೀತಿಗೆ ಅಡ್ಡಪಡಿಸುತ್ತಿರುವ ಶತ್ರುಗಳು ಎಂದು ಭಾವಿಸಿ ಅವರನ್ನು ಓಡಿಸುವ ಗಂಭೀರ ಪ್ರಯತ್ನಗಳನ್ನು ಮಾಡಿದನು. ತಮ್ಮ ಕುಟಿಲ ನೀತಿಯಿಂದ ಭಾರತೀಯ ರಾಜ್ಯಗಳನ್ನು ಕಬಳಿಸುತ್ತಿದ್ದ ಬ್ರಿಟಿಷರನ್ನು ಪರಮ ವೈರಿಗಳು ಎಂದು ತಿಳಿದ ಅವನು ಅವರನ್ನು



(5)

ಭಾರತದಿಂದ ಓಡಿಸುವುದು ತನ್ನ ಆದ್ಯ ಕರ್ತವ್ಯವೆಂದು ತಿಳಿದಿದ್ದನು. ತನ್ನ 17 ವರ್ಷಗಳ ಆಳ್ವಿಕೆಯಲ್ಲಿ ನಿರಂತರವಾಗಿ ಬ್ರಿಟಿಷರೊಂದಿಗೆ ಹೋರಾಡಿದನು. ಅವನು ಬ್ರಿಟಿಷರ ಸಾಮರ್ಥ್ಯ, ತಂತ್ರ, ಕುತಂತ್ರ ಮತ್ತು ಚಾಣಾಕ್ಷ ನೀತಿಗಳನ್ನು ಸ್ಪಷ್ಟವಾಗಿ ಅರ್ಥಮಾಡಿಕೊಂಡಿದ್ದನು. ಬ್ರಿಟಿಷರಿಗೆ ವ್ಯಾಪಾರದಲ್ಲಿ ನಷ್ಟವಾದಲ್ಲಿ ಅದು ಅವರ ರಾಜಕೀಯ ಸ್ವಾಮ್ಯವನ್ನು ಕುಂದಿಸುತ್ತದೆ ಎಂದೂ ಅರಿತಿದ್ದ ಅವನು ಬ್ರಿಟಿಷರನ್ನು ವಿರೋಧಿಸುತ್ತಿದ್ದವರನ್ನು ಸಂಘಟಿಸುವ ಮತ್ತು ಅವರ ನೆರವನ್ನು ಅಪೇಕ್ಷಿಸಲು ಪ್ರಯತ್ನಿಸಿದನು. ಅವರಿಗೆ ವ್ಯಾಪಾರದಲ್ಲಿ ಲಾಭವಾಗದಂತೆ ನೋಡಿಕೊಳ್ಳುವ ಮೂಲಕ ವ್ಯಾಪಾರದ ಮೇಲೆ ಅವರು ಸಾಧಿಸಿದ್ದ ಏಕಸ್ವಾಮ್ಯವನ್ನು ಮುರಿಯುವ ಪ್ರಯತ್ನಗಳನ್ನು ನಡೆಸಿದನು. ಇವು ಬ್ರಿಟಿಷರಲ್ಲಿ ಟಿಪ್ಪುವಿನ ವಿರುದ್ಧ ಮತ್ತಷ್ಟು ದ್ವೇಷ ಭಾವನೆಗಳನ್ನು ಮೂಡಿಸಿದವು.

**ನಿಮಗಿದು ತಿಳಿದಿರಲಿ :**

*18ನೇ ಶತಮಾನದಲ್ಲಿ ಬ್ರಿಟಿಷ್ ಆಳ್ವಿಕೆಯ ವಿಸ್ತರಣೆಯನ್ನು ತಡೆಯಲು ಮಾಡಿದ ಪ್ರಯತ್ನಗಳಿಂದ ಹೈದರಾಲಿ ಮತ್ತು ಟಿಪ್ಪುಸುಲ್ತಾನರು ವಿಭಿನ್ನವಾಗಿ ಕಾಣುತ್ತಾರೆ. ಇವರಿಗೆ ಐರೋಪ್ಯರನ್ನು ಸಾಂಪ್ರದಾಯಿಕ ಶಸ್ತ್ರಾಸ್ತ್ರಗಳಿಂದ ಮಣಿಸಲಾಗುತ್ತದೆ ಎಂಬ ಅರಿವಿತ್ತು. ಫ್ರೆಂಚರ ಸಹಾಯದಿಂದ ಹೈದರಾಲಿ ಸೈನ್ಯವನ್ನು ಆಧುನೀಕರಿಸಲು ಯತ್ನಿಸಿದ್ದ. ಐರೋಪ್ಯ ಸೈನ್ಯದಂತೆ ಶಿಸ್ತಾಗಿ ಕವಾಯತು ಮಾಡುವ ಮತ್ತು ಬಂದೂಕನ್ನು ಬಳಸುವ ಪಡೆಗಳು ಮೈಸೂರಿನ ಸೈನ್ಯದಲ್ಲಿದ್ದವು. ಹೈದರಾಲಿ ಮತ್ತು ಟಿಪ್ಪುಸುಲ್ತಾನರು ಭಾರತದಲ್ಲಿ ಮೊದಲಬಾರಿಗೆ ಯುದ್ಧದಲ್ಲಿ ರಾಕೆಟ್‌ನ್ನು ಬಳಸಿದರು. ಸೈನ್ಯದ ಆಧುನೀಕರಣದ ಜೊತೆಗೆ ತುಂಬಿದ ರಾಜ್ಯದ ಬೊಕ್ಕಸ ಕೂಡಾ ಬ್ರಿಟಿಷರ ಆಕ್ರಮಣದ ತಡೆಗೆ ಅಗತ್ಯವೆನ್ನುವುದನ್ನು ಹೈದರಾಲಿ ಮತ್ತು ಟಿಪ್ಪು ಮನಗಂಡಿದ್ದರು. ಹೈದರಾಲಿಯ ಕಣ್ಣೆದುರಿಗೆ ಕರ್ನಾಟಕ ಪ್ರದೇಶದಲ್ಲಿದ್ದ ನವಾಬರು ದಿವಾಳಿಯಾಗಿದ್ದರು. ಹೈದರಾಲಿ ಮತ್ತು ಟಿಪ್ಪು ಆರ್ಥಿಕ ವ್ಯವಸ್ಥೆಯನ್ನು ಬಲಗೊಳಿಸಲು ಅನೇಕ ನೀತಿ-ನಿಯಮಗಳನ್ನು ರೂಪಿಸಿದ್ದರು. ಶ್ರೀಗಂಧ ಮತ್ತು ತಂಬಾಕು ಮತ್ತಿತರ ಪದಾರ್ಥಗಳನ್ನು ರಾಜ್ಯದ ಏಕಸ್ವಾಮ್ಯದಡಿಗೆ ತಂದಿದ್ದರು. ಫ್ರೆಂಚ್ ತಂತ್ರಜ್ಞರನ್ನು ಕರೆಯಿಸಿ ಮೈಸೂರಿನ ಸಾಂಪ್ರದಾಯಿಕ ಕರಕುಶಲ ವಸ್ತುಗಳ ಗುಣಮಟ್ಟವನ್ನು ಹೆಚ್ಚಿಸಿ ಅಂತಾರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ವ್ಯಾಪಾರ ಚಟುವಟಿಕೆಗಳನ್ನು ವೃದ್ಧಿಸುವ ಯೋಜನೆಯಲ್ಲಿದ್ದರು.*

**ಮೂರನೆಯ ಆಂಗ್ಲೋ-ಮೈಸೂರು ಯುದ್ಧ :** ಈ ಯುದ್ಧಕ್ಕೆ ನೇರ ಕಾರಣ ಯಾವುದೆಂದರೆ ತಿರುವಾಂಕೂರು ರಾಜಕಾರಣಕ್ಕೆ ಸಂಬಂಧಿಸಿದ ಪ್ರಶ್ನೆ. ಆ ರಾಜ್ಯದ ರಾಜ ನೆರೆಯ ಕೊಚ್ಚಿ ಸಂಸ್ಥಾನದಲ್ಲಿ ಬ್ರಿಟಿಷರ ಬೆಂಬಲದಿಂದ ಕೋಟೆಯನ್ನು ನಿರ್ಮಿಸಿದನು ಮತ್ತು ಆತನು ಡಚ್ಚರಿಂದ ಆಯಕೋಟಾ ಮತ್ತು ಕಾಂಗನೂರು ಕೋಟೆಗಳನ್ನು ಪಡೆದುಕೊಂಡಿದ್ದನು. ಇದು ಮಂಗಳೂರು ಒಪ್ಪಂದದ ಷರತ್ತುಗಳ ಉಲ್ಲಂಘನೆಯಾಗಿತ್ತು.

ಬ್ರಿಟಿಷರು ಜನರಲ್ ಮೆಡೋಸನ ನಾಯಕತ್ವದಲ್ಲಿ ಕಾರವಾರ, ಕೊಯಮತ್ತೂರು, ದಿಂಡಿಗಲ್ ಮೊದಲಾದವುಗಳನ್ನು ವಶಪಡಿಸಿಕೊಂಡರು. ಇದಕ್ಕೆ ವಿರುದ್ಧವಾಗಿ ಟಿಪ್ಪು ಬಾರಾಮಹಲ್ ಪ್ರಾಂತ್ಯವನ್ನು ಮುತ್ತಿ ಸತ್ಯಮಂಗಲವನ್ನು ವಶಪಡಿಸಿಕೊಂಡನು. ತಿರುಚನಾಪಳ್ಳಿಯನ್ನು ಮುತ್ತಿ ಅದನ್ನು ವಶಪಡಿಸಿಕೊಳ್ಳುವ ನಿಟ್ಟಿನಲ್ಲಿ ಆತನು ಸೈನಿಕ ಕಾರ್ಯಾಚರಣೆಗಳನ್ನು ನಡೆಸಿದನಾದರೂ ಅದು ಫಲ ನೀಡಲಿಲ್ಲ. ಈ ಸಮಯದಲ್ಲಿ ಲಾರ್ಡ್ ಕಾರ್ನ್‌ವಾಲೀಸ್ ಬ್ರಿಟಿಷ್ ಸೈನ್ಯದ ನಾಯಕತ್ವವನ್ನು ವಹಿಸಿಕೊಂಡನು. ಇದು ಯುದ್ಧದ ಗತಿಯನ್ನು ಬದಲಾಯಿಸಿತು.



(6)

ಬ್ರಿಟಿಷ್ ಸೈನ್ಯ ಕಾರ್ನ್‌ವಾಲೀಸನ ನೇತೃತ್ವದಲ್ಲಿ ಕೋಲಾರ ಮತ್ತು ಹೊಸಕೋಟೆಗಳನ್ನು ವಶಪಡಿಸಿಕೊಂಡು ಬೆಂಗಳೂರಿನತ್ತ ಮುನ್ನುಗ್ಗಿತು. ಬೆಂಗಳೂರನ್ನು ವಶಪಡಿಸಿಕೊಂಡು ಕೋಟೆಯನ್ನು ಹಾಳುಗೆಡವಿತು. ಬೆಂಗಳೂರನ್ನು ವಶಪಡಿಸಿಕೊಂಡ ಕಾರ್ನ್‌ವಾಲೀಸ್ ಟಿಪ್ಪುವಿನ ನಿರ್ನಾಮಕ್ಕಾಗಿ ನಿಜಾಮ ಮತ್ತು ಮರಾಠರ ನೆರವನ್ನು ಕೋರಿದನು. ನಿಜಾಮ ಮತ್ತು ಮರಾಠರ ಸಂಘಟಿತ ಸೈನ್ಯ ಬ್ರಿಟಿಷರೊಂದಿಗೆ ಸೇರುವುದರೊಂದಿಗೆ ಯುದ್ಧ ತಿರುವನ್ನು ಪಡೆದುಕೊಂಡಿತು. ಮರಾಠರು ಸವಣೂರು, ಗಜೇಂದ್ರಗಡ, ಲಕ್ಷ್ಮೇಶ್ವರ, ಹುಬ್ಬಳ್ಳಿ ಮೊದಲಾದವುಗಳನ್ನು ವಶಪಡಿಸಿಕೊಂಡರು.

1792ರಲ್ಲಿ ಸಂಘಟಿತ ಸೈನ್ಯ ಒಂದೊಂದಾಗಿ ಕೋಟೆಗಳನ್ನು ವಶಪಡಿಸಿಕೊಂಡು ಶ್ರೀರಂಗಪಟ್ಟಣದ ಕಡೆ ಸಾಗಿತು. ರಾತ್ರಿ ವೇಳೆಯಲ್ಲಿ ಕೋಟೆಯನ್ನು ಹಾಳುಗೆಡವಲಾಯಿತು. ಇದರಿಂದ ವಿಚಲಿತಗೊಂಡ ಟಿಪ್ಪು ಬ್ರಿಟಿಷರೊಂದಿಗೆ ಒಪ್ಪಂದವನ್ನು ಮಾಡಿಕೊಳ್ಳಲು ನಿರ್ಧರಿಸಿದನು. ಇದು ಆತನಿಗೆ ಅನಿವಾರ್ಯವೂ ಆಗಿತ್ತು. 1792ರಲ್ಲಿ ಅಸಮಾನ ಷರತ್ತುಗಳನ್ನು ಹೊಂದಿದ್ದ 'ಶ್ರೀರಂಗಪಟ್ಟಣ ಒಪ್ಪಂದ'ಕ್ಕೆ ಟಿಪ್ಪು ಸಹಿಹಾಕುವ ಮೂಲಕ ಯುದ್ಧಕ್ಕೆ ತೆರೆಯಾಯಿತು. ಈ ಒಪ್ಪಂದದನ್ವಯ ಮೂರನೆ ಆಂಗ್ಲೋ-ಮೈಸೂರು ಯುದ್ಧ ಕೊನೆಗೊಂಡಿತು.

ಟಿಪ್ಪುವನ್ನು ಮಣಿಸಲು ಬ್ರಿಟಿಷರು ಶ್ರೀರಂಗಪಟ್ಟಣ ಒಪ್ಪಂದದಲ್ಲಿ ಅಸಮಾನ ಷರತ್ತುಗಳು ಇರುವಂತೆ ನೋಡಿಕೊಂಡರು. ಆ ಷರತ್ತುಗಳು ಯಾವುವೆಂದರೆ; ಟಿಪ್ಪು ತನ್ನ ಅರ್ಧ ರಾಜ್ಯವನ್ನು ಬಿಟ್ಟುಕೊಡುವುದು, ಮೂರು ಕೋಟಿ ರೂಪಾಯಿಗಳನ್ನು ಯುದ್ಧನಷ್ಟ ಭರ್ತಿಯಾಗಿ ಕೊಡುವುದು, ಯುದ್ಧನಷ್ಟ ಭರ್ತಿಗೆ ಗ್ಯಾರಂಟಿಯಾಗಿ ತನ್ನ ಇಬ್ಬರು ಗಂಡು ಮಕ್ಕಳನ್ನು ಒತ್ತೆಯಾಗಿ ನೀಡುವುದು, ಮತ್ತು ಯುದ್ಧದ ಸಂದರ್ಭದಲ್ಲಿ ಸೆರೆ ಹಿಡಿಯಲಾಗಿದ್ದ ಸೈನಿಕರನ್ನು ಬಿಡುಗಡೆಗೊಳಿಸುವುದು. ಇದರನ್ವಯ ಶ್ರೀರಂಗಪಟ್ಟಣದಿಂದ ಬ್ರಿಟಿಷರ ನೇತೃತ್ವದಲ್ಲಿನ ಸಂಘಟಿತ ಸೈನ್ಯ ಹಿಂತೆಗೆಯಿತು.


**ನಾಲ್ಕನೆಯ ಆಂಗ್ಲೋ ಮೈಸೂರು ಯುದ್ಧ :** ಟಿಪ್ಪು ಮೂರನೆಯ ಆಂಗ್ಲೋ ಮೈಸೂರು ಯುದ್ಧದಲ್ಲಿನ ಸೋಲನ್ನು ವೈಯಕ್ತಿಕವಾಗಿ ಸ್ವೀಕರಿಸಿ ಅದನ್ನು ಒಂದು ಪ್ರಮುಖ ಸವಾಲೆಂದೇ ಪರಿಗಣಿಸಿದನು. ಒಪ್ಪಂದದನ್ವಯ ಬ್ರಿಟಿಷರ ನೇತೃತ್ವದಲ್ಲಿನ ಮಿತ್ರಕೂಟಕ್ಕೆ ನೀಡಬೇಕಾದ ಭೂಪ್ರದೇಶಗಳು ಮತ್ತು ಹಣವನ್ನು ಚಾಚೂ ತಪ್ಪದೆ ಸಲ್ಲಿಸಿ ಒತ್ತೆಯಾಳಾಗಿ ಕಳುಹಿಸಿಕೊಟ್ಟಿದ್ದ ತನ್ನ ಇಬ್ಬರು ಮಕ್ಕಳನ್ನು ಹಿಂದಕ್ಕೆ ಕರೆಯಿಸಿಕೊಂಡನು ಟಿಪ್ಪು ಬ್ರಿಟಿಷರ ಅಧೀನದಲ್ಲಿದ್ದ ಮಲೆಯಾಳಂ ಮಾತನಾಡುವ ಭೂಪ್ರದೇಶಗಳು ನ್ಯಾಯಯುತವಾಗಿ ತನಗೇ ಸೇರಬೇಕೆಂದು ವಾದಿಸಿದನು. ಆದರೆ ಬ್ರಿಟಿಷರು ಅದನ್ನು ಪುಷ್ಟೀಕರಿಸಲಿಲ್ಲ.

ಲಾರ್ಡ್ ವೆಲ್ಲೆಸ್ಲಿ 1798ರಲ್ಲಿ ಭಾರತದ ಗವರ್ನರ್ ಜನರಲ್‌ನಾಗಿ ನೇಮಕಗೊಂಡನು. ಟಿಪ್ಪುವಿನ ವಿರೋಧಿ ರಾಜಕೀಯ ಚಟುವಟಿಕೆಗಳು ಈತನ ಅವಧಿಯಲ್ಲಿ ಚುರುಕುಗೊಂಡವು. ಟಿಪ್ಪು ಭಾರತೀಯ ರಾಜರ ಒಕ್ಕೂಟವನ್ನು ತನ್ನೆಡೆಗೆ ಸೆಳೆಯಲು ಮಾಡುತ್ತಿದ್ದ ಪ್ರಯತ್ನಗಳು ಹಾಗೂ ತಮ್ಮ ಬದ್ಧ ವೈರಿಗಳಾದ ಫ್ರೆಂಚರೊಂದಿಗೆ ಟಿಪ್ಪು ಹೊಂದಿದ್ದ ಸಂಬಂಧಗಳು ವೆಲ್ಲೆಸ್ಲಿಯಲ್ಲಿ ಟಿಪ್ಪುವಿನ ವಿಚಾರದಲ್ಲಿ ಮತ್ತಷ್ಟು ದ್ವೇಷ ಭಾವನೆಗಳನ್ನು ಬೆಳೆಸಿದವು. ಟಿಪ್ಪು ಬ್ರಿಟಿಷರ ವಿರುದ್ಧವಾಗಿದ್ದ ಫ್ರೆಂಚರ ಸಹಕಾರ ಪಡೆಯಲು ಪ್ರಯತ್ನಿಸಿ ರಾಯಭಾರಿಯನ್ನು ಕಳುಹಿಸಿದ್ದನು. ಇದು ಬ್ರಿಟಿಷರಿಗೆ ಅಸಮಾಧಾನವನ್ನು ತಂದಿತು. ಟಿಪ್ಪು ಮತ್ತು ಫ್ರೆಂಚರ ನಡುವಿನ ಸ್ನೇಹ ಮುಂದಕ್ಕೆ ತಮ್ಮ ಅಧಿಪತ್ಯಕ್ಕೆ ಮುಳುವಾಗಬಹುದೆಂಬ ಭಾವನೆಗಳು ಬ್ರಿಟಿಷರಲ್ಲಿ ಬೆಳೆಯಿತು.

ಹೊಸ ಷರತ್ತಗಳನ್ನು ಒಳಗೊಂಡಿರುವ ಸಹಾಯಕ ಸೈನ್ಯ ಪದ್ಧತಿಯನ್ನು ಟಿಪ್ಪುವಿನ ಮೇಲೆ ಹೇರಲಾಯಿತು. ಆದರೆ ಟಿಪ್ಪು ಅಮಾನವೀಯ ಸಹಾಯಕ ಸೈನ್ಯ ಪದ್ಧತಿ ಮತ್ತು ಅಸಮಾನ ಷರತ್ತುಗಳನ್ನು ಒಳಗೊಂಡಿದ್ದ ಇದನ್ನು ಒಪ್ಪಿಕೊಳ್ಳಲು ನಿರಾಕರಿಸಿದನು. ಇದರಿಂದಾಗಿ ನಾಲ್ಕನೇ ಆಂಗ್ಲೋ-ಮೈಸೂರು ಯುದ್ಧವು ಪ್ರಾರಂಭವಾಯಿತು.

1799ರಲ್ಲಿ ಯುದ್ಧ ಆರಂಭವಾಯಿತು. ಅಭೇದ್ಯವಾದ ಕೋಟೆಯನ್ನು ಬ್ರಿಟಿಷರು ಭೇದಿಸಿದರು. ಎರಡೂ ಸೈನ್ಯಗಳು ವೀರಾವೇಶದಿಂದ ಕಾದಾಡಿದವು. ಟಿಪ್ಪು ತನ್ನ ಸೈನ್ಯವನ್ನು ಹುರಿದುಂಬಿಸುತ್ತ ಹೋರಾಡಿ 1799ರಲ್ಲಿ ಹತನಾದನು. ಆತನ ಮರಣ ಬ್ರಿಟಿಷರಿಗೆ ಇಡೀ ಭಾರತವೇ ತಮ್ಮ ಕೈವಶವಾದ ಸಂತೋಷವನ್ನು ತಂದಿತು. ನಂತರ ಬ್ರಿಟಿಷರು ಆತನ ಹತೋಟಿಯಲ್ಲಿದ್ದ ಭೌಗೋಳಿಕ ಪ್ರದೇಶಗಳನ್ನು ಮರಾಠರು ಮತ್ತು ನಿಜಾಮನೊಂದಿಗೆ ಹಂಚಿಕೊಂಡರು. ಒಂದು ಸಣ್ಣ ಭೌಗೋಳಿಕ ಪ್ರದೇಶವು ಮೈಸೂರು ಒಡೆಯರ ರಾಜವಂಶದ ಪ್ರತಿನಿಧಿಗೆ ವರ್ಗಾಯಿಸಲ್ಪಟ್ಟಿತ್ತು. ಈ ಪ್ರದೇಶ ತರುವಾಯ ಮೈಸೂರು ಸಂಸ್ಥಾನವೆಂದು ಹೆಸರಾಯಿತು.

ಟಿಪ್ಪು ನಂತರದ ಮೈಸೂರು




**ಹತ್ತನೆಯ ಚಾಮರಾಜೇಂದ್ರ ಒಡೆಯರು (1881–1894) :** ಬ್ರಿಟಿಷ್ ಸರಕಾರವು ತನ್ನ ಆಶ್ವಾಸನೆಯಂತೆ 1881ರಲ್ಲಿ ಮೈಸೂರಿನ ಸಿಂಹಾಸನವನ್ನು ಹತ್ತನೆಯ ಚಾಮರಾಜೇಂದ್ರ ಒಡೆಯರಿಗೆ ವಹಿಸಿತು. ಕಮೀಷನರ್ ಆಡಳಿತ ಕೊನೆಗೊಂಡು ರೆಸಿಡೆಂಟ್ ಎಂಬ ಬ್ರಿಟಿಷ್ ಪ್ರತಿನಿಧಿಯನ್ನು ನೇಮಿಸಲಾಯಿತು. ಇವರ ಜೊತೆಗೆ ದಿವಾನರಾಗಿ ಸಿ. ರಂಗಾಚಾರ್ಲುರವರು ನೇಮಿಸಲ್ಪಟ್ಟರು. ಇವರು ಒಳ್ಳೆಯ ಆಡಳಿತಗಾರರೂ, ಉದಾರ ಮನೋಭಾವವುಳ್ಳವರೂ ಆಗಿದ್ದರು. ಅವರು ಮೈಸೂರು ಪ್ರಜಾಪ್ರತಿನಿಧಿ ಸಭೆಯನ್ನು ಪ್ರಾರಂಭಿಸಿದರು. 1881ರಲ್ಲಿ ಕೋಲಾರದ ಚಿನ್ನದಗಣಿ, 1882ರಲ್ಲಿ ಬೆಂಗಳೂರು – ಮೈಸೂರು ರೈಲುಮಾರ್ಗವನ್ನು ಆರಂಭಿಸಿದರು.

1883ರಲ್ಲಿ ರಂಗಾಚಾರ್ಲು ಕಾಲವಾದ ನಂತರ ಕೆ. ಶೇಷಾದ್ರಿ ಅಯ್ಯರ್ ದಿವಾನರಾದರು. ರಾಜ್ಯದ ವಿವಿಧ ಅಧಿಕಾರ ಸ್ಥಾನಗಳಲ್ಲಿ ಕೆಲಸ ಮಾಡಿದ ಇವರಿಗೆ ದೇಶದ ಸಮಸ್ತ ಸಮಸ್ಯೆಗಳ ಅರಿವು ಇದ್ದಿತು. ಅವರು ದೇಶದ ಹಣಕಾಸಿನ ಸ್ಥಿತಿಯನ್ನು ಉತ್ತಮಗೊಳಿಸಿದರು. ಹಲವು ಹೊಸ ರೈಲುಮಾರ್ಗಗಳ ರಚನೆಗೆ ಕಾರಣಕರ್ತರಾದರು. ದೇಶದ ಆಡಳಿತ ಸೇವೆಗಾಗಿ ಪ್ರತಿಭಾವಂತ ಯುವಕರನ್ನು ಆಯ್ಕೆಮಾಡಲು ಮೈಸೂರು



(8)

# ಅನುಬಂಧ-3

<table>
<tr><th>ತರಗತಿ</th><th>2017-18ನೇ ಸಾಲಿನಲ್ಲಿ ಟಿಪ್ಪುವಿನ ಕುರಿತ ವಿಷಯಾಂಶಗಳು</th><th>2023-24ನೇ ಸಾಲಿನಲ್ಲಿ ಟಿಪ್ಪುವಿನ ಕುರಿತ ವಿಷಯಾಂಶಗಳು</th></tr>
<tr><td>6ನೇ ತರಗತಿ<br>ಸಮಾಜ ವಿಜ್ಞಾನ<br>ಭಾಗ-1</td><td>ಚಾರಿತ್ರಿಕ ಹಿನ್ನೆಲೆ<br>ಮೈಸೂರಿನ ರಾಜೇತಿಹಾಸ, ಸ್ಪಷ್ಟವಾಗಿ ಆರಂಭವಾಗುವುದು ಗಂಗರ ಕಾಲದಿಂದ ಎಂದು ಹೇಳಲಾಗುತ್ತದೆ. ತಲಕಾಡು ಗಂಗರ ರಾಜಧಾನಿಯಾಗಿತ್ತು. ಆನಂತರ ಚೋಳರು, ಹೊಯ್ಸಳರು ಮತ್ತು ವಿಜಯನಗರದ ಅರಸರು ಮೈಸೂರು ಪ್ರದೇಶದಲ್ಲಿ ಆಳ್ವಿಕೆ ನಡೆಸಿದರು.<br>ಮೈಸೂರು ಅನೇಕ ಶತಮಾನಗಳ ಕಾಲ ಒಡೆಯರ್ ಅವರ ಮನೆತನದ ಆಳ್ವಿಕೆಯಲ್ಲಿತ್ತು. ಕೆಲವು ವರ್ಷಗಳ ಕಾಲ ಅದು ಹೈದರಾಲಿ ಮತ್ತು ಅವರ ಮಗ ಟಿಪ್ಪು ಸುಲ್ತಾನ್ ಅವರುಗಳ ಆಡಳಿತದ ವಶದಲ್ಲಿತ್ತು. ಚಾರಿತ್ರಿಕವಾಗಿ ಮತ್ತು ಪೌರಾಣಿಕವಾಗಿ ಮೈಸೂರನ್ನು ಮಹಿಷನಾಡು ಎಂದು ಕರೆಯಲಾಗುತ್ತದೆ. ಪುರಾಣ ಕಥೆಯ ಪ್ರಕಾರ ದೇವಿ ಪಾರ್ವತಿಯು ಚಾಮುಂಡೇಶ್ವರಿ ರೂಪ ಧರಿಸಿ ಮಹಿಷಾಸುರನನ್ನು ಕೊಂದಳು. ಮಹಿಷಾಸುರನನ್ನು ಕೊಂದ ಸ್ಥಳವೇ ಮೈಸೂರಾಯಿತು. ಯದುರಾಯ ಅನ್ನುವವರು ಒಡೆಯರ್ ಮನೆತನದ ಮೊದಲ ಅರಸು. ಚಿಕ್ಕದೇವರಾಯ ಒಡೆಯರ್ ಅವರು ಪ್ರಸಿದ್ಧ ದೊರೆಯಾಗಿದ್ದರು. ಅವರ ನಂತರ ಸಿಂಹಾಸನಕ್ಕೆ ಬಂದ ಅರಸರು ದುರ್ಬಲರಾಗಿದ್ದರು. ಆ ಸಮಯದಲ್ಲಿ ಸೇನಾಧಿಪತಿಯಾಗಿದ್ದ ಹೈದರಾಲಿಯು ಆಳ್ವಿಕೆಯನ್ನು ವಶಪಡಿಸಿಕೊಂಡ. ಅವನು ಮತ್ತು ಅವನ ಮಗ ಟಿಪ್ಪು ಸುಲ್ತಾನ್ 1761 ರಿಂದ 1799 ರವರೆಗೆ ಆಡಳಿತ ನಡೆಸಿದರು. ಬ್ರಿಟಿಷರ ವಿರುದ್ಧ ಅನೇಕ ಹೋರಾಟಗಳನ್ನು ಟಿಪ್ಪು ನಡೆಸಿದನು. ಫ್ರೆಂಚ್ ಜೊತೆಯಲ್ಲಿ ಸಹಾಯಕ್ಕೆ ಸಂಧಾನ ನಡೆಸಿ ಬ್ರಿಟಿಷರನ್ನು ದೇಶದಿಂದ ಹೊರಹಾಕಲು ಟಿಪ್ಪು ಸುಲ್ತಾನ್ ಪ್ರಯತ್ನಿಸಿದ. ಟಿಪ್ಪು ಸುಲ್ತಾನನು ಅನೇಕ ಜನಪರ ಕಾರ್ಯಗಳನ್ನು ಕೈಗೊಂಡನು.<br><br>ಟಿಪ್ಪು ಸುಲ್ತಾನನು 1799ರಲ್ಲಿ ಬ್ರಿಟಿಷರ ಜೊತೆಗಿನ ಯುದ್ಧದಲ್ಲಿ ಪ್ರಾಣ ತೆತ್ತನು. ನಂತರ ಬ್ರಿಟಿಷರು ಆಡಳಿತವನ್ನು ಮತ್ತೆ ಒಡೆಯರ ವಶಕ್ಕೆ ನೀಡಿದರು. ಆಡಳಿತದಲ್ಲಿ ದೌರ್ಬಲ್ಯವನ್ನು ಕಂಡು ಬ್ರಿಟಿಷರು 1831ರಲ್ಲಿ ಆಡಳಿತವನ್ನು ತಮ್ಮ ವಶಕ್ಕೆ ತೆಗೆದುಕೊಂಡರು. ಆದರೆ 1881ರಲ್ಲಿ ಮತ್ತೆ ಆಳ್ವಿಕೆಯನ್ನು ಒಡೆಯರ ವಶಕ್ಕೆ ನೀಡಿದರು. ಕಳೆದ 20ನೆಯ ಶತಮಾನದ ಆದಿ ಭಾಗದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತದಲ್ಲಿ ಅನೇಕ ಜನಪರ ಕಾರ್ಯಗಳಾದವು ವಿಶೇಷವಾಗಿ ಶಿಕ್ಷಣ, ಸಂಸ್ಕೃತಿ, ನೀರಾವರಿಗೆ ಇವರು ಆದ್ಯತೆ ನೀಡಿದರು. ಸರ್. ಎಮ್. ವಿಶ್ವೇಶ್ವರಯ್ಯ ಮತ್ತು ಸರ್. ಮಿರ್ಜಾ ಇಸ್ಮಾಯಿಲ್ ಅವರ ದಿವಾನಗಿರಿಯಲ್ಲಿ ಮೈಸೂರು ಅಪೂರ್ವ ಯಶಸ್ಸನ್ನು ಪಡೆಯಿತು. 1947ರಲ್ಲಿ ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಮೈಸೂರು ಸಂಸ್ಥಾನವು ಭಾರತ ಗಣರಾಜ್ಯದಲ್ಲಿ ವಿಲೀನಗೊಂಡಿತು.</td><td>ಚಾರಿತ್ರಿಕ ಹಿನ್ನೆಲೆ<br>ಮೈಸೂರಿನ ರಾಜೇತಿಹಾಸ, ಸ್ಪಷ್ಟವಾಗಿ ಆರಂಭವಾಗುವುದು ಗಂಗರ ಕಾಲದಿಂದ. ತಲಕಾಡು ಗಂಗರ ರಾಜಧಾನಿಯಾಗಿತ್ತು. ಅನಂತರ ಚೋಳರು, ಹೊಯ್ಸಳರು ಮತ್ತು ವಿಜಯನಗರದ ಅರಸರು ಮೈಸೂರು ಪ್ರದೇಶದಲ್ಲಿ ಆಳ್ವಿಕೆ ನಡೆಸಿದರು.<br>ಮೈಸೂರು ಅನೇಕ ಶತಮಾನಗಳ ಕಾಲ ಒಡೆಯರ್ ಅವರ ಮನೆತನದ ಆಳ್ವಿಕೆಯಲ್ಲಿತ್ತು. ಕೆಲವು ವರ್ಷಗಳ ಕಾಲ ಅದು ಹೈದರಾಲಿ ಮತ್ತು ಅವರ ಮಗ ಟಿಪ್ಪೂಸುಲ್ತಾನ್ ಅವರುಗಳ ಆಡಳಿತದ ವಶದಲ್ಲಿತ್ತು. ಚಾರಿತ್ರಿಕವಾಗಿ ಮತ್ತು ಪೌರಾಣಿಕವಾಗಿ ಮೈಸೂರನ್ನು ಮಹಿಷನಾಡು ಎಂದು ಕರೆಯಲಾಗುತ್ತದೆ. ಪುರಾಣ ಕಥೆಯ ಪ್ರಕಾರ ದೇವಿ ಪಾರ್ವತಿಯು ಚಾಮುಂಡೇಶ್ವರಿ ರೂಪ ಧರಿಸಿ, ರಾಕ್ಷಸನಾಗಿದ್ದ ಮಹಿಷಾಸುರನನ್ನು ಸಂಹರಿಸಿದಳು. ಮಹಿಷಾಸುರನನ್ನು ಸಂಹರಿಸಿದ ಸ್ಥಳವೇ ಮೈಸೂರಾಯಿತು. ಯದುರಾಯ ಅನ್ನುವವರು ಒಡೆಯರ್ ಮನೆತನದ ಮೊದಲ ಅರಸು. ಚಿಕ್ಕದೇವರಾಜ ಒಡೆಯರ್ ಅವರು ಪ್ರಸಿದ್ಧ ದೊರೆಯಾಗಿದ್ದರು. ಅವರ ನಂತರ ಸಿಂಹಾಸನಕ್ಕೆ ಬಂದ ಅರಸರು ದುರ್ಬಲರಾಗಿದ್ದರು. ಆ ಸಮಯದಲ್ಲಿ ಸೇನಾಧಿಪತಿಯಾಗಿದ್ದ ಹೈದರಾಲಿಯು ಆಳ್ವಿಕೆಯನ್ನು ಅಕ್ರಮವಾಗಿ ವಶಪಡಿಸಿಕೊಂಡ. ಅವನು ಮತ್ತು ಅವನ ಮಗ ಟಿಪ್ಪೂಸುಲ್ತಾನ್ 1761 ರಿಂದ 1799 ರವರೆಗೆ ಆಡಳಿತ ನಡೆಸಿದರು.<br>ಟಿಪ್ಪೂಸುಲ್ತಾನನ ಮರಣದ ನಂತರ ಮೈಸೂರಿನ ಆಡಳಿತವು ಮತ್ತೆ ಒಡೆಯರ ಕೈಗೆ ಬಂತು. ಬ್ರಿಟಿಷರು 1831ರಲ್ಲಿ ಆಡಳಿತವನ್ನು ತಮ್ಮ ವಶಕ್ಕೆ ತೆಗೆದುಕೊಂಡರು. ಆದರೆ 1881ರಲ್ಲಿ ಮತ್ತೆ ಆಳ್ವಿಕೆಯನ್ನು ಒಡೆಯರ ವಶಕ್ಕೆ ನೀಡಿದರು. ಕಳೆದ 20ನೆಯ ಶತಮಾನದ ಆದಿ ಭಾಗದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತದಲ್ಲಿ ಅನೇಕ ಜನಪರ ಕಾರ್ಯಗಳಾದವು ವಿಶೇಷವಾಗಿ ಶಿಕ್ಷಣ, ಸಂಸ್ಕೃತಿ, ನೀರಾವರಿಗೆ ಇವರು ಆದ್ಯತೆ ನೀಡಿದರು. ಸರ್. ಎಮ್. ವಿಶ್ವೇಶ್ವರಯ್ಯ ಮತ್ತು ಸರ್. ಮಿರ್ಜಾ ಇಸ್ಮಾಯಿಲ್ ಅವರ ದಿವಾನಗಿರಿಯಲ್ಲಿ ಮೈಸೂರು ಅಪೂರ್ವ ಯಶಸ್ಸನ್ನು ಪಡೆಯಿತು. 1947ರಲ್ಲಿ ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಮೈಸೂರು ಸಂಸ್ಥಾನವು ಭಾರತ ಗಣರಾಜ್ಯದಲ್ಲಿ ವಿಲೀನಗೊಂಡಿತು.<br>ಈ ವಿಭಾಗದ ಬೇರೆ ಬೇರೆ ಜಿಲ್ಲೆಗಳಲ್ಲಿ ವಿವಿಧ ರಾಜ ಮನೆತನಗಳು ಆಳ್ವಿಕೆ ನಡೆಸಿದ ಚರಿತ್ರೆಯಿದೆ. ಕೊಡಗು ಪ್ರದೇಶದಲ್ಲಿ ಅನೇಕ ರಾಜ ಮನೆತನಗಳು ಆಡಳಿತ ನಡೆಸಿದವು. ಹಾಲೇರಿ ಮನೆತನವು 17ನೆಯ ಶತಮಾನದಲ್ಲಿ ತನ್ನ ಆಳ್ವಿಕೆಯನ್ನು ಸ್ಥಾಪಿಸಿತು. ಬಿದನೂರು ಇವರ ರಾಜಧಾನಿಯಾಗಿತ್ತು. ಹಾಲೇರಿ ಅರಸರಲ್ಲಿ ದೊಡ್ಡವೀರಪ್ಪ ಪ್ರಸಿದ್ಧ ದೊರೆ. ಚಿಕ್ಕವೀರರಾಜ ಕೊನೆಯ ಅರಸ. ಇವನು ದುರ್ಬಲನಾಗಿದ್ದ. ಇದನ್ನು ಬಳಸಿಕೊಂಡು ಬ್ರಿಟಿಷರು ಆಡಳಿತವನ್ನು ತಮ್ಮ ವಶಕ್ಕೆ ತೆಗೆದುಕೊಂಡರು.</td></tr>
</table>

| | | |
|---|---|---|
| | | ಸ್ವಾತಂತ್ರ್ಯಾನಂತರ ಕೊಡಗು ಪ್ರತ್ಯೇಕ ರಾಜ್ಯವಾಗಿತ್ತು. ಆದರೆ 1956ರಲ್ಲಿ ಅದು ಕರ್ನಾಟಕದಲ್ಲಿ ವಿಲೀನಗೊಂಡಿತು. ಕೆಳದಿ ಸಂಸ್ಥಾನ ಮತ್ತೊಂದು ರಾಜಮನೆತನವಾಗಿದೆ.<br>ಕರ್ನಾಟಕದ ಕರಾವಳಿ ಪ್ರದೇಶವನ್ನು ತುಳುನಾಡು ಎಂದು ಕರೆಯುತ್ತಿದ್ದರು. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳನ್ನು ಒಳಗೊಂಡ ತುಳುನಾಡಲ್ಲಿ 7ನೆಯ ಶತಮಾನದಿಂದ 14ನೆಯ ಶತಮಾನದವರೆಗೆ ಅಳುಪ ಮನೆತನದ ಅರಸರು ಆಳ್ವಿಕೆ ನಡೆಸಿದರು. ಬೇರೆ ಬೇರೆ ಕಾಲಘಟ್ಟಗಳಲ್ಲಿ ಉದ್ಯಾವರ, ಮಂಗಲಪುರ, ಹುಂಚ ಮತ್ತು ಬನವಾಸಿಗಳು ಅಳುಪರ ರಾಜಧಾನಿಗಳಾಗಿದ್ದವು. ತುಳುನಾಡಿನಲ್ಲಿ ಅನೇಕ ಪಾಳೆಗಾರರು ಆಡಳಿತ ನಡೆಸಿದರು. ಅವರಲ್ಲಿ ಪ್ರಸಿದ್ಧರಾದವರೆಂದರೆ ಪುತ್ತಿಗೆಯ ಚೌಟರು, ಬಂಗವಾಡಿಯ ಬಂಗರು, ಕಾರ್ಕಳದ ಬೈರವರಸರು, ಕಾಸರಗೋಡಿನ ಕುಂಬಳೆ ಅರಸರು ಮುಂತಾದವರು. |
| 7ನೇ ತರಗತಿ<br>ಸಮಾಜ ವಿಜ್ಞಾನ<br>ಭಾಗ-1 | **ಟಿಪ್ಪು ಸುಲ್ತಾನ್ (ಸಾ.ಶ. 1782–1799)**<br>ಹೈದರಾಲಿಯ ಮಗನೇ ಟಿಪ್ಪು ಸುಲ್ತಾನ್, ತನ್ನ ತಂದೆಯ ಕಾಲದ ಯುದ್ಧಗಳಲ್ಲಿ ಪಾಲ್ಗೊಂಡು ವಿಜಯವನ್ನು ಗಳಿಸಿದ ಟಿಪ್ಪು ಸುಲ್ತಾನ್ ಧೀರ ತರುಣನಾಗಿದ್ದನು. ತನ್ನನ್ನು ಸುಲ್ತಾನನೆಂದು ಘೋಷಿಸಿಕೊಂಡನು.<br>ತಂದೆಯ ಮರಣಾನಂತರ ಆಗ ನಡೆಯುತ್ತಿದ್ದ ಎರಡನೇ ಆಂಗ್ಲೋ ಮೈಸೂರು ಯುದ್ಧವನ್ನು ಟಿಪ್ಪು ಮುಂದುವರೆಸಿದನು. ಆತನ ಸಹಾಯಕ್ಕೆ ಯಾರೂ ಬರಲಿಲ್ಲ. ಟಿಪ್ಪು ಏಕಾಂಗಿಯಾಗಿ ಬ್ರಿಟಿಷರನ್ನು ಎದುರಿಸಿದನು. ಅಂತಿಮವಾಗಿ ಬ್ರಿಟಿಷರು 'ಮಂಗಳೂರು ಶಾಂತಿ ಒಪ್ಪಂದ' ಮಾಡಿಕೊಂಡರು. ಮಂಗಳೂರು ಒಪ್ಪಂದ ಉಭಯ ಪಕ್ಷದವರಿಗೂ ಹಿತಕರವಾಗಿದ್ದಿತು. ಇಬ್ಬರೂ ಗೆದ್ದಿದ್ದ ಪ್ರದೇಶಗಳನ್ನು ಬಿಟ್ಟುಕೊಟ್ಟು ಯುದ್ಧ ಖೈದಿಗಳನ್ನು ಹಿಂತಿರುಗಿಸಿದರು. ಇದು ಟಿಪ್ಪುವಿನ ಘನತೆಯನ್ನು ಹೆಚ್ಚಿಸಿತು.<br>ಅಲ್ಪಕಾಲದಲ್ಲಿಯೇ ಟಿಪ್ಪು ಮತ್ತು ಬ್ರಿಟಿಷರ ನಡುವೆ ಇನ್ನೆರಡು ಯುದ್ಧಗಳು ನಡೆದವು. ಟಿಪ್ಪು ಮತ್ತು ಬ್ರಿಟಿಷರ ನಡುವಣ ಪರಸ್ಪರ ದ್ವೇಷ ಮತ್ತು ಅಪನಂಬಿಕೆಯೇ ಈ ಯುದ್ಧಗಳಿಗೆ ಮೂಲ ಕಾರಣವಾಗಿತ್ತು.<br>ಮೂರನೆಯ ಆಂಗ್ಲೋ ಮೈಸೂರು ಯುದ್ಧದಲ್ಲಿ ಬ್ರಿಟಿಷರು ಆಕ್ರಮಣ ಮಾಡುತ್ತಾ ರಾಜಧಾನಿಯಾದ ಶ್ರೀರಂಗಪಟ್ಟಣವನ್ನು ಮುತ್ತಿಗೆ ಹಾಕಿದರು. ಬೇರೆ ಮಾರ್ಗ ತೋಚದೆ ಟಿಪ್ಪು ಬ್ರಿಟಿಷರೊಡನೆ ಶ್ರೀರಂಗಪಟ್ಟಣ ಶಾಂತಿ ಒಪ್ಪಂದ ಮಾಡಿಕೊಂಡನು. ಶಾಂತಿ ಒಪ್ಪಂದದಂತೆ ಇವನು ತನ್ನ ಅರ್ಧರಾಜ್ಯವನ್ನು ಬ್ರಿಟಿಷರಿಗೆ ಒಪ್ಪಿಸಿದನು. ಯುದ್ಧ ನಷ್ಟವಾಗಿ 330 ಲಕ್ಷ ರೂಪಾಯಿ ಪರಿಹಾರ ಧನವನ್ನು ಅವರಿಗೆ ನೀಡಬೇಕಾಯಿತು. ಅದನ್ನು ಕೊಡುವವರೆಗೆ ತನ್ನಿಬ್ಬರು ಮಕ್ಕಳನ್ನು ಬ್ರಿಟಿಷರಿಗೆ ಒತ್ತೆಯಾಳಾಗಿ ಕೊಡಬೇಕಾಯಿತು. ಯುದ್ಧದ ಪರಿಣಾಮವಾಗಿ ಟಿಪ್ಪು ಅವಮಾನಗೊಂಡನು. ಬ್ರಿಟಿಷರನ್ನು ಭಾರತದಿಂದ ಹೊರದಬ್ಬಲು ದೃಢಸಂಕಲ್ಪ | **ಟಿಪ್ಪು ಸುಲ್ತಾನ್**<br>ತನ್ನ ತಂದೆಯ ಕಾಲದ ಯುದ್ಧಗಳಲ್ಲಿ ಪಾಲ್ಗೊಂಡು ವಿಜಯವನ್ನು ಗಳಿಸಿದ ಟಿಪ್ಪು ಸುಲ್ತಾನ್ ಧೀರ ತರುಣನಾಗಿದ್ದ. ತನ್ನನ್ನು ಸುಲ್ತಾನನೆಂದು ಘೋಷಿಸಿ ತನ್ನ ರಾಜ್ಯ 'ದೈವದತ್ತ'ವೆಂದು ಪ್ರಕಟಿಸಿಕೊಂಡ.<br>ತಂದೆಯ ಮರಣಾನಂತರ ಆಗ ನಡೆಯುತ್ತಿದ್ದ ಯುದ್ಧವನ್ನು ಟಿಪ್ಪು ಮುಂದುವರಿಸಿದ. ಆತನ ಸಹಾಯಕ್ಕೆ ಯಾರೂ ಬರಲಿಲ್ಲ. ಟಿಪ್ಪು ಏಕಾಂಗಿಯಾಗಿ ಬ್ರಿಟಿಷರನ್ನು ಎದುರಿಸಲಾರದೆ **ಮಂಗಳೂರಿನಲ್ಲಿ ಒಪ್ಪಂದ** ಮಾಡಿಕೊಂಡ. ಮಂಗಳೂರು ಒಪ್ಪಂದ ಉಭಯ ಪಕ್ಷದವರಿಗೂ ಹಿತಕರವಾಗಿದ್ದಿತು. ಇಬ್ಬರೂ ಗೆದ್ದಿದ್ದ ಪ್ರದೇಶಗಳನ್ನು ಬಿಟ್ಟುಕೊಟ್ಟು ಯುದ್ಧಖೈದಿಗಳನ್ನು ಹಿಂತಿರುಗಿಸಿದರು.<br>ಅಲ್ಪಕಾಲದಲ್ಲೇ ಟಿಪ್ಪು ಮತ್ತು ಬ್ರಿಟಿಷ್ ನಡುವೆ ಇನ್ನೆರಡು ಯುದ್ಧಗಳು ನಡೆದುವು. ಟಿಪ್ಪು ಮತ್ತು ಬ್ರಿಟಿಷರ ನಡುವಣ ಪರಸ್ಪರ ದ್ವೇಷ ಮತ್ತು ಅಪನಂಬಿಕೆಯೇ ಈ ಯುದ್ಧಗಳಿಗೆ ಮೂಲ ಕಾರಣವಾಗಿತ್ತು.<br>**ಮೂರನೆಯ ಮೈಸೂರು ಯುದ್ಧದಲ್ಲಿ** ಬ್ರಿಟಿಷರು ಆಕ್ರಮಣ ಮಾಡುತ್ತಾ ರಾಜಧಾನಿಯಾದ ಶ್ರೀರಂಗಪಟ್ಟಣವನ್ನು ಮುತ್ತಿಗೆ ಹಾಕಿದರು. ಬೇರೆ ಮಾರ್ಗ ತೋಚದೆ ಟಿಪ್ಪು ಬ್ರಿಟಿಷರೊಡನೆ ಶಾಂತಿ ಒಪ್ಪಂದ ಮಾಡಿಕೊಂಡನು. ಶಾಂತಿ ಒಪ್ಪಂದದಂತೆ ಇವನು ಅರ್ಧರಾಜ್ಯವನ್ನು ಬ್ರಿಟಿಷರಿಗೆ ಒಪ್ಪಿಸಿದನು. ಅಪಾರ ಪರಿಹಾರ ಧನವನ್ನು ಅವರಿಗೆ ನೀಡಬೇಕಾಯಿತು. ತನ್ನಿಬ್ಬರು ಮಕ್ಕಳನ್ನು ಕೂಡ ಬ್ರಿಟಿಷರಿಗೆ ಒತ್ತೆಯಾಳಾಗಿ ಕೊಡಬೇಕಾಯಿತು.<br>ಯುದ್ಧದ ಪರಿಣಾಮವಾಗಿ ಟಿಪ್ಪು ಅವಮಾನಗೊಂಡನು. ಬ್ರಿಟಿಷರನ್ನು ಭಾರತದಿಂದ ಹೊರದಬ್ಬಲು ದೃಢಸಂಕಲ್ಪ ಮಾಡಿದನು. ಇದು **ನಾಲ್ಕನೆಯ ಮೈಸೂರು ಯುದ್ಧಕ್ಕೆ** ನಾಂದಿಯಾಯಿತು. ಯುದ್ಧದಲ್ಲಿ ಶ್ರೀರಂಗಪಟ್ಟಣವು ಮುತ್ತಿಗೆಗೊಳಗಾಯಿತು.<br>ಟಿಪ್ಪು ವೀರಾವೇಶದಿಂದ ಹೋರಾಡಿ ಅಸುನೀಗಿದ. ಟಿಪ್ಪುವು 'ಮೈಸೂರಿನ ಹುಲಿ'ಯೆಂದು ಪ್ರಸಿದ್ಧನಾಗಿದ್ದಾನೆ.<br>ಟಿಪ್ಪು ಸುಲ್ತಾನನ ಮರಣಾನಂತರ ಮೈಸೂರು ರಾಜ್ಯ |

| | | |
|---|---|---|
| | ಮಾಡಿದನು. ಇದು ನಾಲ್ಕನೆಯ ಆಂಗ್ಲೋ ಮೈಸೂರು ಯುದ್ಧಕ್ಕೆನಾಂದಿಯಾಯಿತು.<br>ಯುದ್ಧದಲ್ಲಿ ಶ್ರೀರಂಗಪಟ್ಟಣವು ಮುತ್ತಿಗೆಗೊಳಗಾಯಿತು. ಟಿಪ್ಪು ವೀರಾವೇಶದಿಂದ ಹೋರಾಡುತ್ತಲೇ 1799ರಲ್ಲಿ ಅಸುನೀಗಿದನು. ಟಿಪ್ಪುವು 'ಮೈಸೂರಿನ ಹುಲಿ'ಯೆಂದು ಪ್ರಸಿದ್ಧನಾಗಿದ್ದಾನೆ.<br>ಟಿಪ್ಪು ಸುಲ್ತಾನನ ಮರಣಾನಂತರ ಮೈಸೂರು ರಾಜ್ಯ ಬ್ರಿಟಿಷರ ವಶವಾಯಿತು. ಬ್ರಿಟಿಷರು ಒಡೆಯರ್ ರಾಜವಂಶದ ಮುಮ್ಮಡಿ ಕೃಷ್ಣರಾಜ ಒಡೆಯರಿಗೆ ರಾಜ್ಯವನ್ನು ಹಸ್ತಾಂತರಿಸಿದರು. ಆದರೆ ಮೈಸೂರು ರಾಜ್ಯ ಬ್ರಿಟಿಷರ ಆಶ್ರಿತ ರಾಜ್ಯವಾಯಿತು.<br>**ಟಿಪ್ಪುವಿನ ವ್ಯಕ್ತಿತ್ವ ಮತ್ತು ಸಾಧನೆಗಳು**<br>ವಿಜ್ಞಾನ ಕ್ಷೇತ್ರದ ಸಾಧನೆಗಳ ಬಗ್ಗೆ ಅವನಿಗೆ ಉತ್ತಮ ತಿಳುವಳಿಕೆ ಇತ್ತು. ಅವನು ಒಳ್ಳೆಯ ಗ್ರಂಥಾಲಯವನ್ನು ಹೊಂದಿದ್ದನು. ಬೆಂಗಳೂರಿನ ಅರಮನೆ, ಶ್ರೀರಂಗಪಟ್ಟಣದ ಬೇಸಿಗೆ ಅರಮನೆ (ದರಿಯಾ ದೌಲತ್) ನಿರ್ಮಾಣವನ್ನು ಟಿಪ್ಪು ಮಾಡಿಸಿದನು. ಬೇಸಿಗೆ ಅರಮನೆಯ ಗೋಡೆ, ಚಾವಣಿ ಮತ್ತು ಕಂಬಗಳ ಮೇಲೆ ಚಾರಿತ್ರಿಕ ಸಂಗತಿಗಳನ್ನು ಆಕರ್ಷಕವಾಗಿ ಚಿತ್ರಿಸಲಾಗಿದೆ.<br>ಟಿಪ್ಪು ರಾಜ್ಯದ ಸಮೃದ್ಧಿಗಾಗಿ ಬಹಳವಾಗಿ ಶ್ರಮಿಸಿದನು. ರೇಷ್ಮೆ ವ್ಯವಸಾಯವನ್ನು ರಾಜ್ಯದಲ್ಲಿ ವ್ಯಾಪಕವಾಗಿ ಜನಪ್ರಿಯಗೊಳಿಸಿದ್ದು ಅವನ ಮುಖ್ಯ ಸಾಧನೆಯಾಗಿದೆ. ಫ್ರೆಂಚ್ ಅಧಿಕಾರಿಗಳ ನೆರವಿನಿಂದ ತನ್ನ ಸೈನ್ಯವನ್ನು ಆಧುನಿಕವಾಗಿ ಸಜ್ಜುಗೊಳಿಸಿದನು. ಶ್ರೀರಂಗಪಟ್ಟಣದಲ್ಲಿ ಫಿರಂಗಿಗಳನ್ನು ಎರಕ ಹೊಯ್ಯುತ್ತಿದ್ದರು. ಟಿಪ್ಪು ರಾಕೆಟ್ ಬಳಸುವ ತಂತ್ರಜ್ಞಾನವನ್ನು ಕರಗತ ಮಾಡಿಕೊಂಡದ್ದು ಒಂದು ವಿಶೇಷ. ಟಿಪ್ಪು ಕೆಲವು ಹಿಂದೂ ದೇವಾಲಯಗಳಿಗೆ ದಾನದತ್ತಿಯನ್ನೂ, ಶೃಂಗೇರಿ ಮಠಕ್ಕೆ ದೇಣಿಗೆಯನ್ನೂ ನೀಡಿದನು. ಅವನು ಭೂಹಿಡುವಳಿಯಲ್ಲಿ ಸುಧಾರಣೆ ಮಾಡಿ ರೈತರಿಗೆ ಸುಲಭ ಕಂತಿನ ಸಾಲ ಒದಗಿಸುವುದನ್ನು ಒಳಗೊಂಡಂತೆ ಅನೇಕ ಸೌಲಭ್ಯಗಳನ್ನು ಒದಗಿಸಿದನು.<br>ಶ್ರೀರಂಗಪಟ್ಟಣದಲ್ಲಿರುವ ಹೈದರಾಲಿಯ ಸಮಾಧಿ ಮತ್ತು ಜುಮ್ಮಾ ಮಸೀದಿ ಟಿಪ್ಪುವಿನ ಭವ್ಯ ನಿರ್ಮಾಣಗಳು. ಮಸೀದಿಯ ಉನ್ನತವಾದ ಮಿನಾರುಗಳು ಆಕರ್ಷಕವಾಗಿವೆ. ಶ್ರೀರಂಗಪಟ್ಟಣ ಮತ್ತು ಬೆಂಗಳೂರಿನಲ್ಲಿ ಟಂಕಶಾಲೆಗಳನ್ನು ನಿರ್ಮಿಸಿದನು. | ಬ್ರಿಟಿಷರ ವಶವಾಯಿತು, ಬ್ರಿಟಿಷರು ಒಡೆಯರ ರಾಜವಂಶದ ಮುಮ್ಮಡಿ ಕೃಷ್ಣರಾಜ ಒಡೆಯರಿಗೆ ರಾಜ್ಯವನ್ನು ಹಸ್ತಾಂತರಿಸಿದರು. ಆದರೆ ಮೈಸೂರು ಬ್ರಿಟಿಷರ ಆಶ್ರಿತ ರಾಜ್ಯವಾಯಿತು. |

ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಪಠ್ಯಪುಸ್ತಕ ಸಂಘ (ರಿ)
ಬೆಂಗಳೂರು